# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ವೃಷಭ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರೀತಿಯ ಜೀವನ ಇಂದು ನಿಜವಾಗಿಯೂ ಸುಂದರವಾಗಿ ಅರಳುತ್ತದೆ. ಉದ್ಯಮಿಗಳಿಗೆ ಒಳ್ಳೆಯ ದಿನ.

### ಮಿಥುನ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನಿಮ್ಮ ಕಿಟಕಿಯಲ್ಲಿ ಹೂವಿಡುವ ಮೂಲಕ ನಿಮ್ಮ ಪ್ರೀತಿಯನ್ನು ತೋರಿಸಿ. ನೀವು ಪ್ರಭಾವಿ ಜನರ ಜೊತೆ ಓಡಾಡಿದಲ್ಲಿ ನಿಮ್ಮ ವೃತ್ತಿಯಲ್ಲಿ ಭರ ಬೆಳವಣಿಗೆ ಸಾಧಿಸುತ್ತೀರಿ.

### ಕರ್ಕ ರಾಶಿ

ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ಒಂದು ಸ್ಥಳದಲ್ಲಿ ನಿಂತಾಗ ಪ್ರೀತಿ ನಿಮ್ಮನ್ನು ಒಂದು ಹೊಸ ಜಗತ್ತಿಗೆ ತೆಗೆದುಕೊಂಡು ಹೋಗಬಹುದು. ಇದು ನೀವು ಪ್ರಣಯಭರಿತ ಪ್ರವಾಸಕ್ಕೆ ಹೋಗುವ ದಿನ.

### ಸಿಂಹ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರಬಹುದು. ಇದನ್ನು ಪರಿಹರಿಸುವುದಕ್ಕಾಗಿ ನೀವು ನಿಮ್ಮ ತಂದೆ ಅಥವಾ ತಂದೆಗೆ ಸಮಾನವಾದಂತಹ ಯಾವುದೇ ವ್ಯೆವ್ಯಕ್ತಿಯಿಂದ ಸಲಹೆಯನ್ನು ತೆಗೆದುಕೊಳ್ಳಬಹುದು. ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು.

### ಕನ್ಯಾ ರಾಶಿ

ಮಾನಸಿಕ ಭಯ ನೀವು ಧೈರ್ಯಗೆಡಿಸಬಹುದು. ಸಕಾರಾತ್ಮಕ ಚಿಂತನೆ ಮತ್ತು ಉಜ್ವಲವಾದ ಭವಿಷ್ಯವನ್ನು ನೋಡುವುದು ಇದನ್ನು ದೂರವಿಡುತ್ತದೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ

### ತುಲಾ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ವೃಶ್ಚಿಕ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು. ಮಕ್ಕಳು ಅವರ ವೃತ್ತಿಯನ್ನುಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು.

### ಧನು ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

### ಮಕರ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

### ಕುಂಭ ರಾಶಿ

ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ. ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ.

### ಮೀನ ರಾಶಿ

ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ನಿಮ್ಮ ಸಂಬಂಧಿಕರು ಮತ್ತು ಸ್ನೇಹಿತರು ನಿಮ್ಮ ಹಣಕಾಸನ್ನು ನಿರ್ವಹಿಸಿದಲ್ಲಿ ನೀವು ಶೀಘ್ರದಲ್ಲೇ ನಿಮ್ಮ ಬಜೆಟ್ ಮೀರಬಹುದಾದ್ದರಿಂದ ಹಾಗೆ ಮಾಡಲು ಬಿಡಬೇಡಿ.

## ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಉತ್ತರ ಕರ್ನಾಟಕದ ಶಾಸಕರಿಂದ ಸಿಎಂ ಸಿದ್ದರಾಮಯ್ಯ ಅವರಿಗೆ ಸನ್ಮಾನ



**ಗದಗ:** ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡಿದ ಸಿಎಂ ಸಿದ್ದರಾಮಯ್ಯನ ಅವರಿಗೆ ಉತ್ತರ ಕರ್ನಾಟಕದ ಎಲ್ಲಾ ಶಾಸಕರು ಭೇಟಿ ಮಾಡಿ ಸನ್ಮಾನಿಸಿದರು.

ಮಾ. 16ರಂದು ಮಾಜಿ ಸಚಿವ ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವ ಮತ್ತು ಗದಗ ಕೋ. ಆಪರೇಟೀವ್ "ಕಾಟನ್ ಸೇಲ್ಸ್ ಸೊಸೈಟಿಯ ನೂತನ ಕಟ್ಟಡ"ದ ಉದ್ಘಾಟನಾ ಸಮಾರಂಭದಲ್ಲಿ ವೈದ್ಯಕೀಯ ಕಾರಣಗಳಿಂದಾಗಿ ಭಾಗವಹಿಸಲು ಸಾಧ್ಯವಾಗದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದೇ ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡವುದಾಗಿ ಬದ್ಧ ಎಂದು ತಿಳಿಸಿದ್ದರು.

ಈ ಹಿನ್ನೆಲೆಯಲ್ಲಿ ಕಳೆದ ಗುರುವಾರ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟದಲ್ಲಿ ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ

ಮಾಡುವುದಾಗಿ ನಿರ್ಣಯ ಕೈಗೊಂಡಿದ್ದರಿಂದ ಸಚಿವರಾದ ಶರಣಪ್ರಕಾಶ ಪಾಟೀಲ, ಎಚ್.ಕೆ. ಪಾಟೀಲ ಒಳಗೊಂಡಂತೆ ಉತ್ತರ ಕರ್ನಾಟಕದ ವಿವಿಧ ವಿಧಾನಸಸಭಾ ಕ್ಷೇತ್ರಗಳ ಶಾಸಕರಾದ ಜಿ.ಎಸ್. ಪಾಟೀಲ, ಪ್ರಸಾದ್ ಅಬ್ಬಯ್ಯ, ಬಸವರಾಜ ಶಿವಣ್ಣನವರ, ಯು.ಬಿ. ಬಣಕಾರ, ಜಿ.ಟಿ. ಪಾಟೀಲ, ಪ್ರಕಾಶ ಕೋಳಿವಾಡ, ಎನ್.ಎಚ್. ಕೋನರಡ್ಡಿ, ಮಾಜಿ ಶಾಸಕ ಡಿ.ಆರ್. ಪಾಟೀಲ ಸೇರಿ ಅನೇಕ ಮುಖಂಡರು, ಕಾರ್ಯಕರ್ತರು ಸಿಎಂ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಿದರು.

# ಕಲಾಕುಂಚದಿಂದ ಉಚಿತ ರಂಗೋಲಿ ಸ್ಪರ್ಧೆಯ ಬಹುಮಾನ ವಿತರಣೆ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ಯುಗಾದಿ ಹಬ್ಬದ ಪ್ರಯುಕ್ತ "ಮನೆಯಂಗಳದಲ್ಲಿ ಉಚಿತ ರಂಗೋಲಿ ಸ್ಪರ್ಧೆ" ಹಮ್ಮಿಕೊಂಡಿದ್ದು ಏಪ್ರಿಲ್ 6 ರಂದು ಭಾನುವಾರ ಸಂಜೆ 5 ಗಂಟೆಗೆ ಕಲಾಕುಂಚ ಕಚೇರಿಯ ಆವರಣದ ಸಭಾಂಗಣದಲ್ಲಿ ವಿವಿಧ ಬಡಾವಣೆಗಳ ಅವರವರ ಮನೆಯ ಮುಂದೆ ರಂಗೋಲಿ ಹಾಕಿ ಸ್ಪರ್ಧೆಯಲ್ಲಿ ಭಾಗವಹಿಸಿದ ಬಹುಮಾನ ವಿಜೇತರಿಗೆ ಬಹುಮಾನ, ಅಭಿನಂದನಾ ಪತ್ರ ವಿತರಿಸಲಾಗುವುದು ಎಂದು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿಯವರ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಕಲಾಕುಂಚ ಎಲೆಬೇತೂರು ಶಾಖೆಯ ಅಧ್ಯಕ್ಷರಾದ ಡಾ॥ ನಿರ್ಮಲಾ ವಿಶ್ವನಾಥ್ ಕುಲಕರ್ಣಿ, ಡಿ.ಸಿ.ಎಂ.ಟೌನ್‌ಶಿಪ್ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಶಾರದಮ್ಮ ಶಿವನಪ್ಪ, ಎಂ.ಸಿ.ಸಿ. ಬ್ಲಾಕ್ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾ ರವೀಂದ್ರ, ಸಿದ್ಧವೀರಪ್ಪ ಬಡಾವಣೆ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್, ವಿದ್ಯಾನಗರ ಶಾಖೆಯ ಅಧ್ಯಕ್ಷರಾದ ರಾಜಶೇಖರ ಬೆನ್ನೂರು, ಕೆ.ಬಿ.ಬಡಾವಣೆ ಶಾಖೆಯ ಅಧ್ಯಕ್ಷರಾದ ವಿ.ಕೃಷ್ಣಮೂರ್ತಿ ಆಗಮಿಸಲಿದ್ದಾರೆ.

ಬಹುಮಾನ ವಿಜೇತರು ಸೇರಿದಂತೆ ಕಲಾ ಪ್ರತಿಭಾವಂತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಸಮಾರಂಭ ಯಶಸ್ವಿಗೊಳಿಸಬೇಕಾಗಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ಉಮೇಶ್ ವಿನಂತಿಸಿದ್ದಾರೆ.

## ಏ 5 ರಿಂದ ಬೇಸಿಗೆ ಚೆಸ್ ತರಬೇತಿ ಶಿಬಿರ

**ದಾವಣಗೆರೆ :** ದಾವಣಗೆರೆ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ ಬೇಸಿಗೆ ರಜೆಯಲ್ಲಿ ತರಳಬಾಳು ಬಡಾವಣೆ ಮತ್ತು ನಿಜಲಿಂಗಪ್ಪ ಬಡಾವಣೆಯಲ್ಲಿ 3 ರಿಂದ 15 ವರ್ಷದ ಒಳಗಿನ ಮಕ್ಕಳಿಗೆ ಚೆಸ್ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಸಂಘದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ತಿಳಿಸಿದರು.

ಏಪ್ರಿಲ್ 5 ರಿಂದ 15 ದಿನಗಳ ಕಾಲ ಏ 19 ರವರೆಗೆ ಮತ್ತು 20 ರಿಂದ ಮೇ 3 ಹಾಗೂ ಮೇ 4 ರಿಂದ 17 ರ ವರೆಗೆ ಸತತ 45 ದಿನಗಳ ಕಾಲ ಹಾಗೂ ಈ ಬಾರಿ ವಿಶೇಷವಾಗಿ 4 ರಿಂದ 7 ವರ್ಷದ ಮೇಲ್ಪಟ್ಟ ಮಕ್ಕಳಿಗೆ ಸಂಜೆ

ವಿಶೇಷ ಬ್ಯಾಚ್ ಮಾಡಿ ಚೆಸ್ ತರಬೇತಿ ನೀಡಲಾಗುವುದು ಹೆಚ್ಚಿನ ಮಾಹಿತಿಗಾಗಿ ಟಿ ಯುವರಾಜ್ 9945613469 ಮಂಜುಳಾರಾಜ್ 7259310197 ಸಂಪರ್ಕಿಸಲು ತಿಳಿಸಿದರುಇದೇ ಸಂದರ್ಭದಲ್ಲಿ ಮಾತನಾಡಿ ದಾವಣಗೆರೆ ಜಿಲ್ಲಾ



ಚೆಸ್ ಅಸೋಸಿಯೇಷನ್ ವತಿಯಿಂದ ಚೆಸ್ ಕ್ಲಬ್ ಉದ್ಘಾಟನೆ ಮಾಡಲಾಗುತ್ತಿದ್ದು ಪ್ರತಿ ಶನಿವಾರ ಮತ್ತು ಭಾನುವಾರ ಸಂಜೆ ಉಚಿತವಾಗಿ ದಾವಣಗೆರೆ ಜಿಲ್ಲೆಯ ಸ್ಪರ್ಧಾಳುಗಳಿಗೆ ಅನುಕೂಲವಾಗುವಂತೆ ಅಭ್ಯಾಸ ಮಾಡಲು ಚೆಸ್ ಕ್ಲಬ್ ಸಂಘದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಏಪ್ರಿಲ್ 5 ರಶನಿವಾರ ಸಂಜೆ ಉದ್ಘಾಟನೆ ಮಾಡಲಿದ್ದಾರೆ ಯುವರಾಜ್ ತಿಳಿಸಿದರು.

# ಬಸವಾದಿ ಶರಣರಿಗೂ ಮಾರ್ಗದರ್ಶಕರು : ದೇವರ ದಾಸಿಮಯ್ಯ



**ಹಾಸನ:** ದೇವರ ದಾಸಿಮಯ್ಯ ಅವರು ಕೇವಲ ಒಂದು ಜಾತಿ ಧರ್ಮಕ್ಕೆ ಸೀಮಿತವಾಗದೆ ಸಮಸ್ತ ಕುಲ ಕೋಟಿಗೆ ಸೇರಿದವರಾಗಿದ್ದಾರೆ, ಇವರು ವಚನ ಸಾಹಿತ್ಯಕ್ಕೆ ನೀಡಿರುವ ಕೊಡುಗೆ ಅಪಾರವಾದದ್ದು ಎಂದು ನಗರ ಸಭೆಯ ಅಧ್ಯಕ್ಷರಾದ ಚಂದ್ರೇಗೌಡ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಶ್ರೀ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ನಗರದ ಆರ್.ಸಿ ರಸ್ತೆಯಲ್ಲಿ ದೇವರ ದಾಸಿಮಯ್ಯ ಅವರ ಸರ್ಕಲ್ ನಿರ್ಮಿಸಿರುವುದು ಎಲ್ಲರಿಗೂ ಸಂತಸದ ವಿಷಯವಾಗಿದೆ. ಕ್ರಿಯೆ ಜ್ಞಾನದಿಂದ ಉತ್ತಮ ಮನುಷ್ಯರಾಗಬಲ್ಲಿರಿ ಎಂದು ದೇವರ ದಾಸಿಮಯ್ಯ ಅವರು ಹೇಳಿದ್ದಾರೆ. ಇವರು ದೇವರಿಗೆ ಪ್ರಶ್ನೆ ಮಾಡಿದ ಮಹಾನ್ ಮೇಧಾವಿ ಆಗಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಬಿ.ಪಿ ಕೃಷ್ಣೇಗೌಡ ಅವರು ಮಾತನಾಡಿ ದೇವರ ದಾಸಿಮಯ್ಯ ಅವರು 12ನೇ ಶತಮಾನದಲ್ಲಿ ಗದಗ ಜಿಲ್ಲೆಯಲ್ಲಿ ಜನಿಸಿದರು ಇವರು ನೇಕಾರರಾಗಿದ್ದಾರೆ, ದೇಹದ ಸಂರಕ್ಷಣೆಗಾಗಿ ವಸ್ತ್ರವನ್ನು ತಯಾರಿಸುವ ಮೂಲಕ ಸಮಾಜದ ಮಾನವ ಕುಲಕ್ಕೆಲ್ಲ ಅನುಕೂಲ ಮಾಡಿಕೊಟ್ಟಿದ್ದಾರೆ. ಅವರ ವಚನ, ಜೀವನ ಶೈಲಿ, ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

ಸಾಹಿತಿಗಳಾದ ಗೊರೂರು ಅನಂತರಾಜು ಅವರು ಮಾತನಾಡಿ ನೇಯ್ಗೆ ಕಾಯಕದ ಅವತಾರ ಪುರುಷ ದೇವರ ದಾಸಿಮಯ್ಯ ಅವರಾಗಿದ್ದಾರೆ, ಇವರು ಬಸವಾದಿ ಶರಣರಿಗೂ ಮಾರ್ಗದರ್ಶಕರಾಗಿದ್ದವರು, ನೇಯ್ಗೆ ವೃತ್ತಿಯಿಂದ ಕಾಯಕಕ್ಕೆ ಬುನಾದಿ ಹಾಕಿದವರು, ವಚನ ಸಾಹಿತ್ಯಕ್ಕೆ ಪೀಠಿಕೆ ಬರೆದು ಮುನ್ನುಡಿ ಹಾಕಿದವರು ದೇವರ ದಾಸಿಮಯ್ಯ, ಶರಣರ ತತ್ವಗಳನ್ನು ಪ್ರಚಾರ ಮಾಡಿದವರಾಗಿದ್ದಾರೆ. ಬಸವಣ್ಣನವರು ಕೂಡ ಇವರ ಕುರಿತು ವಚನಗಳಲ್ಲಿ ಹಾಡಿ ಹೊಗಳಿದ್ದಾರೆ ಎಂದು ದೇವರ ದಾಸಿಮಯ್ಯ ಅವರ ಕುರಿತು ಸವಿವರವಾಗಿ ಉಪನ್ಯಾಸ ನೀಡಿದರು.

ಜಿಲ್ಲಾಧಿಕಾರಿಯವರ ಕಚೇರಿಯ ತಹಶೀಲ್ದಾರ್ ಎಲ್. ರಮೇಶ್ ಅವರು ಮಾತನಾಡಿ ಮಹನೀಯರು ಹಾಕಿ ಕೊಟ್ಟಿರುವ ಉತ್ತಮ ಸಂದೇಶಗಳ ಹಾದಿಯಲ್ಲಿ ನಾವೆಲ್ಲರೂ ನಡೆಯಲು ಸರ್ಕಾರ ಈ ಜಯಂತಿಗಳನ್ನು ಆಚರಣೆ ಮಾಡುತ್ತ ಬರುತ್ತಿದೆ, ಈ ಮಹನೀಯರು ತಮ್ಮ ವಚನಗಳ ಮೂಲಕ ಸಮಾಜವನ್ನು ತಿದ್ದುವಂತಹ ಕೆಲಸಗಳನ್ನು ಮಾಡಿದ್ದಾರೆ ಇವರುಗಳನ್ನು ನಾವೆಲ್ಲರೂ ಸ್ಮರಿಸೋಣ ಅವರ ಹಾದಿಯಲ್ಲಿ ನಡೆಯೋಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಹೆಚ್.ಪಿ ತಾರಾನಾಥ್, ತಹಶೀಲ್ದಾರರಾದ ಮೋಹನ್ ಕುಮಾರ್, ಹಾಸನ ನೌಕರ ಸಂಘದ ಗೌವಾಧ್ಯಕ್ಷರಾದ ಈ.ಕೃಷ್ಣೇಗೌಡ ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಮೆರವಣಿಗೆಗೆ ಚಾಲನೆ

**ಹಾಸನ :** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಇಂದು ಹಮ್ಮಿಕೊಂಡಿದ್ದ ಶ್ರೀ ದೇವರ ದಾಸಿಮಯ್ಯ ಜಯಂತಿಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಶಾಸಕರಾದ ಸ್ವರೂಪ್ ಪ್ರಕಾಶ್ ಹಾಗೂ ಜಿಲ್ಲಾಧಿಕಾರಿ ಸತ್ಯಭಾಮ ಸಿ ಅವರು ದೇವರ ದಾಸಿಮಯ್ಯ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರೊಂದಿಗೆ ಮೆರವಣಿಗೆಗೆ ಚಾಲನೆ ನೀಡಿದರು.ನಂತರ ಮಾತನಾಡಿದ ಶಾಸಕರು ಜಯಂತಿಗೆ ಹೆಚ್ಚು ಮಹಿಳೆಯರು ಬಂದಿರುವುದು ವಿಶೇಷವಾಗಿದೆ, ನೇಕಾರ ಸಮಾಜ ಆರ್ಥಿಕವಾಗಿ, ರಾಜಕೀಯವಾಗಿ ಬೆಳೆಯಲಿ ಎಂದು ಆಶಿಸಿ ಜಯಂತಿಯ ಶುಭಾಶಯಗಳನ್ನು ತಿಳಿಸಿದರು.ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಹೆಚ್.ಪಿ ತಾರಾನಾಥ್ ಹಾಗೂ ಸಮುದಾಯದ ಮುಖಂಡರು ಹಾಗೂ ಮತ್ತಿತರರು ಹಾಜರಿದ್ದರು.

## ಜಿಲ್ಲಾ ಮಟ್ಟದ ಕ್ರೀಡಾ ಕೂಟ

**ಹಾಸನ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಏ.07 ಮತ್ತು 08 ರಂದು ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಏ.07 ರಂದು ಬೆ.11 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದೆ. ಅಂದು ಸಂಜೆ 06 ಗಂಟೆಗೆ ಅನುರಾಧ ಭಟ್ ಮತ್ತು ತಂಡದವರಿಂದ ಸಂಗೀತ ಸಂಜೆ ರಸಮಂಜರಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್.ರಾಜಣ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಗೌರವ ಉಪಸ್ಥಿತಿ ವಹಿಸಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ. ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್ ರೇವಣ್ಣ ಹಾಗೂ ನಗರಸಭೆ ಅಧ್ಯಕ್ಷರಾದ ಚಂದ್ರೇಗೌಡ ಎಂ. ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿಗಳಾದ ಸತ್ಯಭಾಮ ಸಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಬಿ.ಆರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ ಎಂ.ಎಸ್, , ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಗಿರೀಗೌಡ ಭಾಗವಹಿಸಲಿದ್ದಾರೆ.


**ಮಾನ್ಯ ಗೌರವಾನ್ವಿತ ಪ್ರಧಾನ ಹಿರಿಯ ಸಿವಿಲ್ ಮತ್ತು ಸಿ.ಜೆ.ಎಂ ನ್ಯಾಯಾಧೀಶರ ನ್ಯಾಯಾಲಯ, ದಾವಣಗೆರೆ.**

**ಸಿ.ಆರ್.ಮಿಸ್ ನಂ:177/2025**

**ಅರ್ಜಿದಾರರು:1)** ಪರಮೇಶ್ ಬಿನ್ ಲೇಟ್ ಮಲ್ಲಪ್ಪ ವಯಸ್ಸು 52 ವರ್ಷ,ವ್ಯವಸಾಯ ಹೊನ್ನೂರು ಗ್ರಾಮ, ದಾವಣಗೆರೆ ತಾಲ್ಲೂಕು

2)ಹಾಲೇಶಪ್ಪ ಬಿನ್ ಲೇಟ್ ಮಲ್ಲಪ್ಪ ವಯಸ್ಸು 50 ವರ್ಷ, ವ್ಯವಸಾಯ ಹೊನ್ನೂರು ಗ್ರಾಮ, ದಾವಣಗೆರೆ ತಾಲ್ಲೂಕು 3) ಹನುಮಂತಪ್ಪ ಪೌತಿ ವಾರಸುದಾರರು 3(ಎ) ಬಾರ್ಕಿ ಜ್ಯೋತಿ ಕೋಂ ಲೇಟ್ ಹನುಮಂತಪ್ಪ ವಯಸ್ಸು 39 ವರ್ಷ ಗೃಹಿಣಿ ಹಲುವಾಗಲು ಗ್ರಾಮ, ಹರಪನಹಳ್ಳಿ ತಾಲ್ಲೂಕು

**ವಿರುದ್ಧ**

**ಎದುರುದಾರರು:** 1. ಜನನ–ಮರಣ ನೋಂದಣಾಧಿಕಾರಿಗಳು ತಾಲ್ಲೂಕು ಕಛೇರಿ ದಾವಣಗೆರೆ ತಾಲ್ಲೂಕು

**ಅರ್ಜಿದಾರರುಗಳ ಪರ ನೀಡಲಾದ ಪತ್ರಿಕಾ ಪ್ರಕಟಣಾ ನೋಟೀಸು**

1 ಮತ್ತು 2ನೇ ಅರ್ಜಿದಾರರುಗಳ ತಂದೆಯಾದ ಮತ್ತು 3[ಎ] ರವರ ಮಾವನಾದ ಮಲ್ಲಪ್ಪ ಬಿನ್ ಭರಮಪ್ಪ ಇವರು ದಿನಾಂಕ:02–09–2010 ರಂದು ಸಂಜೆ 6 ಗಂಟೆಯ ಸಮಯದಲ್ಲಿ ಹೆಚ್. ಕಲಪನಹಳ್ಳಿಯವಲ್ಲಿರುವ ಎನ್.ಹೆಚ್ 4 ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಚಿತ್ರದುರ್ಗ ಕಡೆಯಿಂದ ರಾಂಗ್ ಸೈಡಿನ ರಸ್ತೆಯಲ್ಲಿ ಕೆ.ಎ.17–ಎ–5266ನೇ ಮಹಾದೇವ ಬಸ್ಸಿನ ಚಾಲಕ ಬಸ್ಸನ್ನು ಅತೀ ವೇಗವಾಗಿ ಮತ್ತು ನಿರ್ಲಕ್ಷತನದಿಂದ ನಡೆಸಿದ್ದರಿಂದ ಸದರಿ ಮಲ್ಲಪ್ಪ ನವರಿಗೆ ತೀವ್ರ ಸ್ವರೂಪದ ಗಾಯಗಳಾಗಿ ಸ್ಥಳದಲ್ಲಿಯೇ ಮೃತ ಪಟ್ಟಿರುತ್ತಾರೆ. 1 ಮತ್ತು 2ನೇ ಅರ್ಜಿದಾರರುಗಳು ಮೇಲ್ಕಂಡ ಪ್ರಕರಣವನ್ನು ತಮ್ಮ ತಂದೆಯ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ: 6/05/2025 ರಂದು ಬೆಳ್ಳಗೆ 11–00 ಗಂಟೆಗೆ ನೀವು ಖುದ್ದಾಗಿ ಅಥವಾ ನಿಮ್ಮ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ : 03–04–2025 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರುಗಳ ಪರ ವಕೀಲರು
(ವಿಜಯ ಕುಮಾರ್ ಎಸ್)

ಸಹಿ/–
ಶಿರಸ್ತೇದಾರರು
ಮಾನ್ಯ ಗೌರವನ್ವಿತ ಪ್ರಧಾನ ಹಿರಿಯ ಸಿವಿಲ್ ಮತ್ತು ಸಿ.ಜೆ.ಎಂ ನ್ಯಾಯಾಧೀಶರ ನ್ಯಾಯಾಲಯ,ದಾವಣಗೆರೆ



**ಮಾನ್ಯ ಗೌರವಾನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್ ನಂ:1115/2025**

**ಅರ್ಜಿದಾರರು:1)** ಅಜ್ಜಿಂನಪ್ಪ ಬಿನ್ ಹನುಮಂತಪ್ಪ ವಯಸ್ಸು 58 ವರ್ಷ,ವ್ಯವಸಾಯ ಲೋಕಿಕೆರೆ ಗ್ರಾಮ,ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 2) ಡಿ.ಹೆಚ್ ಸಿದ್ದಪ್ಪ ಬಿನ್ ಹನುಮಪ್ಪ ವಯಸ್ಸು 52 ವರ್ಷ, ವ್ಯವಸಾಯ ಶ್ಯಾಗಲೆರೋಡ್,ಲೋಕಿಕೆರೆ ಗ್ರಾಮ ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** 1. ಜನನ–ಮರಣ ನೋಂದಣಾಧಿಕಾರಿಗಳು ತಾಲ್ಲೂಕು ಕಛೇರಿ ದಾವಣಗೆರೆ ತಾಲ್ಲೂಕು/ಜಿಲ್ಲೆ

**ಅರ್ಜಿದಾರರುಗಳ ಪರ ನೀಡಲಾದ ಪತ್ರಿಕಾ ಪ್ರಕಟಣಾ ನೋಟೀಸು**

ಅರ್ಜಿದಾರರುಗಳ ತಾಯಿಯಾದ ಗಂಗಮ್ಮ ಕೋಂ ಹನುಮಪ್ಪ ಇವರು ದಿನಾಂಕ:13–07–2022ರಂದು ದಾವಣಗೆರೆ ತಾಲ್ಲೂಕು, ಲೋಕಿಕೆರೆ ಗ್ರಾಮದಲ್ಲಿರುವ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರುಗಳು ಮೇಲ್ಕಂಡ ಪಕರಣವನ್ನು ತಮ್ಮ ತಾಯಿಯ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ: 15/05/25 ರಂದು ಬೆಳ್ಳಗೆ 11–00 ಗಂಟೆಗೆ ನೀವು ಖುದ್ದಾಗಿ ಅಥವಾ ನಿಮ್ಮ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ : 02–04–2025 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರುಗಳ ಪರ ವಕೀಲರು
(ಹೊನ್ನಪ್ಪನವರ್ ಹೆಚ್.ಎ)

ಸಹಿ/–
ಶಿರಸ್ತೇದಾರರು
ಮಾನ್ಯ ಗೌರವನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,ದಾವಣಗೆರೆ


## ದಶಕಗಳ ಹಿಂದೆಯೇ ರಾಜ್ಯಕ್ಕೆ ಪೊಲೀಸ್ ಧ್ವಜದ ಭಾಗ್ಯ: ಪೂರ್ವ ವಲಯ ಐಜಿಪಿ ರವಿಕಾಂತೇಗೌಡ

**ದಾವಣಗೆರೆ:** ದೇಶದ ಅನೇಕ ರಾಜ್ಯಗಳಿಗೆ ಇದುವರೆಗೂ ತಮ್ಮದೇ ಆದ ಪೊಲೀಸ್ ಧ್ವಜ ಹೊಂದುವ ಭಾಗ್ಯ ಸಿಕ್ಕಿಲ್ಲ. ಆದರೆ, ಅನೇಕ ದಶಕಗಳ ಹಿಂದೆಯೇ ಕರ್ನಾಟಕ ಪೊಲೀಸ್ ಇಲಾಖೆಗೆ ರಾಷ್ಟ್ರಪತಿಗಳು ಪೊಲೀಸ್ ಧ್ವಜ ನೀಡಿರುವುದು ನಮ್ಮ ಹೆಮ್ಮೆ ಎಂದು ಪೂರ್ವ ವಲಯ ಐಜಿಪಿ ರವಿಕಾಂತೇಗೌಡ ತಿಳಿಸಿದರು.

ಬುಧವಾರ ನಗರದ ಡಿಎಆರ್ ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಪೊಲೀಸರು ಹಗಲು ರಾತ್ರಿ ಕೆಲಸ ಮಾಡುವ ಅವಶ್ಯಕತೆ ಮತ್ತು ಜವಾಬ್ದಾರಿ ಇದ್ದು, ನಾವು ನಮ್ಮ ವೈಯಕ್ತಿಕ ಆಸೆಗಳನ್ನು ಬದಿಗಿಡಬೇಕಾಗಿದೆ. ಇದನ್ನು ಸಾರ್ವಜನಿಕರು ಅರ್ಥ ಮಾಡಿಕೊಳ್ಳಲು ಪ್ರತಿ ವರ್ಷ ಪೊಲೀಸ್ ಧ್ವಜ ದಿನಾಚರಣೆ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಸೇರಿದಂತೆ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಏ.5 ರಂದು ಕೆ.ಡಿ.ಪಿ ಸಭೆ

**ಹಾಸನ :** ಶಾಸಕರಾದ ಹೆಚ್.ಕೆ. ಸುರೇಶ್ ಅವರ ಅಧ್ಯಕ್ಷತೆಯಲ್ಲಿ ಏ.5 ರಂದು ಬೆಳಗ್ಗೆ 11 ಗಂಟೆಗೆ ಬೇಲೂರು ತಾಲ್ಲೂಕು ಮಟ್ಟದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆ.ಡಿ.ಪಿ) ಮೂರನೇ ತ್ರೈಮಾಸಿಕ ಸಭೆಯನ್ನು ತಾಲ್ಲೂಕು ಪಂಚಾಯಿತಿ ಸಭಾಗಂಣದಲ್ಲಿ ಏರ್ಪಡಿಸಲಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಕಾಯ್ನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.



# ಭೂಕಂಪ: ಜಗತ್ತಿನ ನೆರವಿನ ಹಸ್ತ

**ಬ್ಯಾಂಕಾಕ್:** ಪ್ರಬಲ ಭೂಕಂಪದಿಂದಾಗಿಮ್ಯಾನ್ಮಾರ್ ಹಾಗೂ ಥಾಯ್ಲೆಂಡ್‌ನಲ್ಲಿ ಸುಮಾರು ಒಂದು ಸಾವಿರ ಜನ ಪ್ರಾಣ ಕಳೆದುಕೊಂಡಿದ್ದು, ಬುದಕುಳಿದವರ ರಕ್ಷಣಾ ಕಾರ್ಯ ಯುದ್ಧೋಪಾದಿಯಲ್ಲಿ ಸಾಗಿದೆ. ಈಹೊತ್ತಿಗೆ ಜಗತ್ತಿನ ವಿವಿಧ ರಾಷ್ಟ್ರಗಳು ಈ ದೇಶಗಳತ್ತ ನೆರವಿನ ಹಸ್ತ ಚಾಚಿವೆ. 'ರಕ್ಷಣಾ ತಂಡವನ್ನು ಹೊತ್ತ ಭಾರತೀಯ ವಿಮಾನ ಶನಿವಾರವೇ ಮ್ಯಾನ್ಮಾರ್ಗೆ ಬಂದಿಳಿದಿದೆ. ಸಿ□130 ಸೇನಾ ಸರಕು ಸಾಗಣೆ ವಿಮಾನದಲ್ಲಿ ಸುರಕ್ಷತಾ ಕಿಟ್‌ಗಳು, ಹೊದಿಕೆ, ಆಹಾರ ಮತ್ತು ಇತರ ಅಗತ್ಯ ವಸ್ತುಗಳನ್ನು ಕಳುಹಿಸಲಾಗಿದೆ. ಇದೇ ನಿಯೋಗದಲ್ಲಿ ರಕ್ಷಣಾ ತಂಡ ಮತ್ತು ವೈದ್ಯರು ಪ್ರಯಾಣಿಸಿದ್ದಾರೆ' ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ತಿಳಿಸಿದ್ದಾರೆ.

ಚೀನಾದ ತುರ್ತು ನಿರ್ವಹಣಾ ಸಚಿವಾಲಯದ 82 ಸದಸ್ಯರ ತಂಡವನ್ನು ಮ್ಯಾನ್ಮಾರ್ಗೆ ಚೀನಾ ಶನಿವಾರ ಕಳುಹಿಸಿದೆ. ವಿಶೇಷ ರಕ್ಷಣಾ ತಂಡವನ್ನು ಮ್ಯಾನ್ಮಾರ್ನ ವಾಣಿಜ್ಯ ಪ್ರದೇ ಶಯಾಂಗಾನ್ಗೆ ಚೀನಾ ಕಳುಹಿಸಿದೆ ಎಂದು ಸಿಸಿಟಿವಿ ವರದಿ ಮಾಡಿದೆ.ಇದರೊಂದಿಗೆ ಮಾನವೀಯ ನೆಲೆಯಲ್ಲಿ ತುರ್ತು ನಿಧಿಯಾಗಿಮ್ಯಾನ್ಮಾರ್ಗೆ 118 ಕೋಟಿ ನೆರವನ್ನು ಚೀನಾ ನೀಡಿದೆ. ಇದರೊಂದಿಗೆ ಅಗತ್ಯ ವಸ್ತುಗಳನ್ನು ಸೋಮವಾರದಿಂದ ಚೀನಾ ಕಳುಹಿಸಲಿದೆ ಎಂದು ವರದಿಯಾಗಿದೆ.ಹಾಂಗ್ಕಾಂಗ್ 51 ಜನರ ರಕ್ಷಣಾ ತಂಡವನ್ನು ಮ್ಯಾನ್ಮಾರ್ಗೆ ಕಳುಹಿಸಿದೆ. ಇದರೊಂದಿಗೆ ಅವಶೇಷಗಳಡಿ ಸಿಲುಕಿದವರ ಪತ್ತೆಗೆ ಶ್ವಾನ ದಳ, ಸಿಲುಕಿರುವವರ ಪತ್ತೆಗೆ ಬಳಸುವ ಡಿಟೆಕ್ಟರ್ ಸೇರಿದಂತೆ 9 ಟನ್ ಅಗತ್ಯ ವಸ್ತುಗಳನ್ನು ಕಳುಹಿಸಲಾಗಿದೆ ಎಂದು ಅಲ್ಲಿನ ಸರ್ಕಾರ ಹೇಳಿದೆ. ಭೂಕಂಪದಲ್ಲಿ ಗಾಯಗೊಂಡವರ ಚಿಕಿತ್ಸೆಗೆ ಅಗತ್ಯವಿರುವ ವೈದ್ಯಕೀಯ ಸಾಮಗ್ರಿಗಳನ್ನು ದುಬೈನಲ್ಲಿರುವ ತನ್ನ ದಾಸ್ತಾನು ಘಟಕದಿಂದ ಕಳುಹಿಸಲಾಗುತ್ತಿದೆ. ಜತೆಗೆ ತುರ್ತು ನಿರ್ವಹಣಾ ತಂಡವನ್ನು ಸಜ್ಜುಗೊಳಿಸಲಾಗಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿದೆ. 'ಭೂಕಂಪ ನಿರ್ವಹಣಾ ತಂಡದೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ. ಇದು ದೊಡ್ಡ ದುರಂತ. ಜೀವ ಮತ್ತು ಆರೋಗ್ಯಕ್ಕೆ ಅಪಾಯಕಾರಿಯಾಗಿದೆ' ಎಂದು ಸಂಸ್ಥೆಯ ವಕ್ತಾರೆಮಾರ್ಗ ರೇಟ್ ಹ್ಯಾರಿಸ್ ತಿಳಿಸಿದ್ದಾರೆ. 'ಇದೊಂದು ದೊಡ್ಡ ದುರಂತ. ನಾವು ಭೂಕಂಪ ಪೀಡಿತ ಪ್ರದೇಶಗಳಿಗೆ ನೆರವಾಗುತ್ತೇವೆ. ಸರ್ಕಾರದ ಮಟ್ಟದಲ್ಲಿ ಈ ಕುರಿತು ಚರ್ಚಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು' ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಐರೋಪ್ಯ ರಾಷ್ಟ್ರಗಳು 23 ಕೋಟಿ ಆರ್ಥಿಕ ನೆರವನ್ನು ಭೂಕಂಪ ಪೀಡಿತ ರಾಷ್ಟ್ರಗಳಿಗೆ ನೀಡುತ್ತಿರುವುದಾಗಿ ಹೇಳಿವೆ. ಮಲೇಷ್ಯಾ ಕೂಡಾ ವಿಪತ್ತು ನಿರ್ವಹಣಾ ತಂಡವನ್ನು ಕಳುಹಿಸುತ್ತಿರುವುದಾಗಿ ಹೇಳಿದೆ. ಭೂಕಂಪ ಪೀಡಿತ ಪ್ರದೇಶದಲ್ಲಿ ತುರ್ತು ಕಾರ್ಯಗಳನ್ನು ಕೈಗೊಳ್ಳಲು ದಕ್ಷಿಣ ಕೊರಿಯಾಸರ್ಕಾರವು 17 ಕೋಟಿ ಆರ್ಥಿಕ ನೆರವು ನೀಡುತ್ತಿರುವುದಾಗಿ ಹೇಳಿದೆ. ನ್ಯೂಜಿಲ್ಯಾಂಡ್ ಸರ್ಕಾರವು 9 ಕೋಟಿ ನೆರವನ್ನು ತುರ್ತು ನಿರ್ವಹಣೆಗಾಗಿ ಅಂತರರಾಷ್ಟ್ರೀಯ ರೆಡ್ ಕ್ರಾಸ್‌ಗೆ











## 118 ಕೋಟಿ ರೂ: ಇದು ಭಾರತದ ಅತ್ಯಂತ ದುಬಾರಿ ಚಿತ್ರಕಲೆಯ ಬೆಲೆ, ಯಾರದ್ದು ಗೊತ್ತೆ?

**ನ್ಯೂಯಾರ್ಕ್:** ಹರಾಜು ಪ್ರಕ್ರಿಯೆ ಒಂದರಲ್ಲಿ ಮಾರಾಟವಾದ 1950 ರ ಅವಧಿಯ ಚಿತ್ರಕಲೆಯೊಂದು ಭಾರತದ ಅತ್ಯಂತ ದುಬಾರಿ ಚಿತ್ರಕಲೆ ಎಂಬ ಖ್ಯಾತಿ ಪಡೆದಿದೆ.ಮಾರ್ಚ್ 19 ರಂದು ನ್ಯೂಯಾರ್ಕ್‌ನಲ್ಲಿ ನಡೆದ ಕ್ರಿಸ್ಟೀಸ್ ಹರಾಜಿನಲ್ಲಿ ನಡೆದ ಈ ಮಾರಾಟ, 2023 ರಲ್ಲಿ ಮುಂಬೈನಲ್ಲಿ ನಡೆದ ಹರಾಜಿನಲ್ಲಿ ಸುಮಾರು 7.4 ಮಿಲಿಯನ್ ಯುಎಸ್ ಡಾಲರ್ (ರೂ. 61.8 ಕೋಟಿ) ಗೆ ಮಾರಾಟವಾದ ಅಮೃತಾ ಶೇರ್-ಗಿಲ್ ಅವರ 1937 ರ 'ದಿ ಸ್ಟೋರಿ ಟೆಲ್ಲರ್' ಮೊತ್ತಕ್ಕಿಂತ ದುಪ್ಪಟ್ಟು ಮೊತ್ತಕ್ಕೆ ಮಾರಾಟವಾಗಿದ್ದು, ಅತ್ಯಂತ ದುಬಾರಿ ಚಿತ್ರಕಲೆಯ ದಾಖಲೆಯನ್ನು ಮುರಿದಿದೆ. ಒಂದೇ ಕ್ಯಾನ್ವಾಸ್‌ನಲ್ಲಿ ಸುಮಾರು 14 ಅಡಿಗಳಷ್ಟು ವಿಸ್ತೀರ್ಣವನ್ನು ಹೊಂದಿರುವ 13 ವಿಶಿಷ್ಟ ಫಲಕಗಳನ್ನು ಒಳಗೊಂಡಿರುವ ಗ್ರಾಮ್ ಯಾತ್ರಾ (ಅಂದರೆ 'ಗ್ರಾಮ ತೀರ್ಥಯಾತ್ರೆ'), ಭಾರತದ ವೈವಿಧ್ಯತೆ ಮತ್ತು ಚೈತನ್ಯವನ್ನು ಪ್ರತಿನಿಧಿಸುತ್ತದೆ. ಖ್ಯಾತ ಚಿತ್ರಕಲಾವಿದ ಎಂಎಫ್ ಹುಸೇನ್ ಅವರ ಕೃತಿ ಇದಾಗಿದೆ."ಮಕ್ಬೂಲ್ ಫಿದಾ ಹುಸೇನ್ ಮತ್ತು ಇಡೀ ವರ್ಗದ ಕೆಲಸಕ್ಕೆ ಹೊಸ ಮಾನದಂಡ ಮೌಲ್ಯವನ್ನು ನಿಗದಿಪಡಿಸುವಲ್ಲಿ ನಾವು ಭಾಗವಾಗಿದ್ದೇವೆ ಎಂದು ನಮಗೆ ಸಂತೋಷವಾಗಿದೆ. ಇದು ಒಂದು ಹೆಗ್ಗುರುತಿನ ಕ್ಷಣವಾಗಿದೆ ಮತ್ತು ಆಧುನಿಕ ಮತ್ತು ಸಮಕಾಲೀನ ದಕ್ಷಿಣ ಏಷ್ಯಾದ ಕಲಾ ಮಾರುಕಟ್ಟೆಯ ಅಸಾಧಾರಣ ಮೇಲ್ಮುಖ ಪಥವನ್ನು ಮುಂದುವರೆಸಿದೆ" ಎಂದು ಕ್ರಿಸ್ಟೀಸ್ ಸೌತ್ ಏಷ್ಯನ್ ಮಾಡರ್ನ್ ಮತ್ತು ಸಮಕಾಲೀನ ಕಲೆಯ ಮುಖ್ಯಸ್ಥ ನಿಶಾದ್ ಅವರಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.ಇದಕ್ಕೂ ಮೊದಲು, ಹುಸೇನ್ ಅವರ ಅತ್ಯಂತ ದುಬಾರಿ ಚಿತ್ರಕಲೆ, ಅನ್ಟೈಲ್ಡ್ (ಪುನರ್ಜನ್ಮ) ಕಳೆದ ವರ್ಷ ಲಂಡನ್‌ನಲ್ಲಿ ಗಖಆ 3.1 ಮಿಲಿಯನ್ (ಸುಮಾರು ರೂ 25.7 ಕೋಟಿ) ಗೆ ಮಾರಾಟವಾಗಿತ್ತು ಸೆಪ್ಟೆಂಬರ್ 17, 1915 ರಂದು ಮಹಾರಾಷ್ಟ್ರದ ಪಂಢರಪುರದಲ್ಲಿ ಜನಿಸಿದ ಹುಸೇನ್, ಭಾರತದ ಅತ್ಯಂತ ಪ್ರಮುಖ ಮತ್ತು ಬೇಡಿಕೆಯ ಕಲಾವಿದರಲ್ಲಿ ಒಬ್ಬರಾಗಿದ್ದಾರೆ.

## 9 ತಿಂಗಳು ಅಂತರಿಕ್ಷದಲ್ಲಿ ಉಳಿದುಕೊಂಡಿದ್ದ ಸುನಿತಾ ವಿಲಿಯಮ್- ಬುಚ್ ವಿಲ್ಮೋರ್‌ಗೆ ಸಿಗುವ ವೇತನ ಎಷ್ಟು?

**ವಾಷಿಂಗ್ಟನ್:** ಬಹಳ ದೀರ್ಘ 9 ತಿಂಗಳ ಕಾಲ ಅಂತರಿಕ್ಷದಲ್ಲಿ ಸಿಕ್ಕಿಹಾಕಿಕೊಂಡಿದ್ದ ನಾಸಾದ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರು ಇಂದು ಮಾರ್ಚ್ 19 ರಂದು ಸುರಕ್ಷಿತವಾಗಿ ಭೂಮಿಗೆ ಮರಳಿದ್ದಾರೆ.ಬೋಯಿಂಗ್‌ನ ಸ್ಟಾರ್ಲೈನರ್ ಬಾಹ್ಯಾಕಾಶ ನೌಕೆಯಲ್ಲಿನ ತಾಂತ್ರಿಕ ಸಮಸ್ಯೆಗಳಿಂದಾಗಿ ಇವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ (ಖಖಖ) ಸಿಕ್ಕಿಹಾಕಿಕೊಂಡಿದ್ದರು. ಜೂನ್ 5, 2024 ರಂದು ಒಂದು ವಾರದ ಕಾರ್ಯಾಚರಣೆಗೆಂದು ಅಂತರಿಕ್ಷಕ್ಕೆ ಹೋದವರು ಅಲ್ಲಿಯೇ ತಾಂತ್ರಿಕ ಸಮಸ್ಯೆಯಿಂದಾಗಿ ಸಿಲುಕಿಹಾಕಿಕೊಂಡಿದ್ದರು.ಅವರನ್ನು ಮರಳಿ ಕರೆತರಲು ಅಮೆರಿಕದ ಗಗನಯಾತ್ರಿ ಮತ್ತು ರಷ್ಯಾದ ಗಗನಯಾತ್ರಿಗಳನ್ನು ಐಎಸ್ ಎಸ್ ನಲ್ಲಿ ಸ್ಪೇಸ್ ಕ್ರೂ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಪ್ರಯಾಣ ಬೆಳೆಸಿತ್ತು.ಹಾಗಾದರೆ ಸುನಿತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್ ಅವರು 9 ತಿಂಗಳ ಕಾಲ ಬಾಹ್ಯಾಕಾಶದಲ್ಲಿ ಉಳಿಯಲು ಎಷ್ಟು ಖರ್ಚು ತಗುಲಿತು ಎಂದು ನೋಡುವುದಾದರೆ, ಸಿಎನ್‌ಬಿಸಿ ವರದಿ ಮಾಡಿರುವಂತೆ, ನಾಸಾದ ಗಗನಯಾತ್ರಿ ಕ್ಯಾಡಿ ಕೋಲ್ಮನ್ ಪ್ರಕಾರ, ಗಗನಯಾತ್ರಿಗಳು ಈ ಸಮಯದಲ್ಲಿ ಕೂಡ ತಮ್ಮ ಎಂದಿನ ನಿಗದಿತ ವೇತನ ಪಡೆದಿದ್ದಾರೆ. ಯಾವುದೇ ಹೆಚ್ಚುವರಿ ವೇತನ ಪಡೆದಿಲ್ಲ. ಉದ್ಯಮ ಪ್ರವಾಸದಲ್ಲಿರುವ ಯಾವುದೇ ಫೆಡರಲ್ ಉದ್ಯೋಗಿಯಂತೆ ಗಗನಯಾತ್ರಿಗಳಿಗೆ ವೇತನ ನೀಡಲಾಗುತ್ತದೆ. ಅವರಿಗೆ ನಿಯಮಿತ ಸಂಬಳ ಸಿಗುತ್ತದೆ, 9 ತಿಂಗಳು ಬಾಹ್ಯಾಕಾಶದಲ್ಲಿದ್ದುದಕ್ಕೆ ಪ್ರತಿದಿನಕ್ಕೆ ಸಣ್ಣಮೊತ್ತ ನೀಡಲಾಗಿದೆ. ತಮಗೆ ಪ್ರತಿದಿನಕ್ಕೆ 4 ಡಾಲರ್ ನೀಡಿದ್ದರು. ನಾಸಾ ಗಗನಯಾತ್ರಿಗಳ ಸಾರಿಗೆ, ವಸತಿ ಮತ್ತು ಆಹಾರವನ್ನು ನೋಡಿಕೊಳ್ಳುತ್ತದೆ ಎಂದು ಕೋಲ್ಮನ್ ವಾಷಿಂಗ್ಟನ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.ವರದಿಗಳ ಪ್ರಕಾರ, ವಿಲಿಯಮ್ಸ್ ಮತ್ತು ವಿಲ್ಮೋರ್ ಸಾಮಾನ್ಯ ವೇತನ ವೇಳಾಪಟ್ಟಿಯ ಅತ್ಯುನ್ನತ ಶ್ರೇಣಿಯಾದ ಉಖ-15 ಶ್ರೇಯಾಂಕವನ್ನು ಹೊಂದಿದ್ದಾರೆ, ಅವರ ಮೂಲ ವೇತನವು ವಾರ್ಷಿಕವಾಗಿ 125 ರಿಂದ 133 ಡಾಲರ್ ನಿಂದ 162,672 ಡಾಲರ್ ಆಗಿದೆ ಅಂದರೆ ಭಾರತೀಯ ಕರೆನ್ಸಿ ಪ್ರಕಾರ ಸುಮಾರು 1.08 ಕೋಟಿ ರೂಪಾಯಿಗಳಿಂದ 1.41 ಕೋಟಿ ರೂಪಾಯಿಗಳ ನಡುವೆ ಇರುತ್ತದೆ ಎಂದು generalschedule.org ತಿಳಿಸಿದೆ.ಈ ಇಬ್ಬರು ಗಗನಯಾತ್ರಿ ಜೋಡಿಯ ಅನುಪಾತದ ವೇತನವು 93,850 ಡಾಲರ್ ನಿಂದ 122,004 ಡಾಲರ್ ಗೆ (ಸುಮಾರು ರೂ. 81 ಲಕ್ಷದಿಂದ ರೂ. 1.05 ಕೋಟಿ) ವರೆಗೆ ಇರುತ್ತದೆ. 1,148 ಡಾಲರ್ ಪ್ರಾಸಂಗಿಕ ವೇತನವನ್ನು ಸೇರಿಸಿದರೆ, ಅವರ ಒಟ್ಟು ಗಳಿಕೆ 94,998 ಡಾಲರ್ ಮತ್ತು 123,152 ಡಾಲರ್ (ಸುಮಾರು 82 ಲಕ್ಷದಿಂದ ರೂ. 1.06 ಕೋಟಿ) ನಡುವೆ ಇರುತ್ತದೆ ಎಂದು ನಿರೀಕ್ಷಿಸಲಾಗಿದೆ.ಫ್ಲೋರಿಡಾ ಕರಾವಳಿಯಲ್ಲಿ ಗಗನಯಾತ್ರಿಗಳು ಭಾರತೀಯ ಕಾಲಮಾನ ಪ್ರಕಾರ ಇಂದು ಬೆಳಗಿನ ಜಾವ 3:27 ಕ್ಕೆ ಬಂದಿಳಿದಿದ್ದಾರೆ.



# ಈರುಳ್ಳಿ ಗಡ್ಡೆಗೂ ಬೆಲೆ ಇಲ್ಲ: ರೈತರು ಕಂಗಾಲು







**ಚಳ್ಳಕೆರೆ:** ಹಿಂಗಾರು ಹಂಗಾಮಿನಲ್ಲಿ ತಡವಾಗಿ ಬಿತ್ತನೆಮಾಡಿದ್ದ ಈರುಳ್ಳಿ ತಾಲ್ಲೂಕಿನಲ್ಲಿ ಕಟಾವಾಗುತ್ತಿದೆ. ಆದರೆಮಾರುಕಟ್ಟೆಯಲ್ಲಿ ಈರುಳ್ಳಿ ಬೆಲೆ ಕುಸಿತವಾಗಿರುವ ಕಾರಣ ರೈತರು ಕಂಗಾಲಾಗಿದ್ದಾರೆ.

ಮುಕ್ತ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಈರುಳ್ಳಿ ಕೆ.ಜಿಗೆ  40ರವರೆಗೂಮಾರಾಟವಾಗುತ್ತಿದೆ. ಆದರೆ ರೈತರಿಂದ ಖರೀದಿಸುವ ಸಗಟು ಈರುಳ್ಳಿ 100 ಕೆ.ಜಿ ಬ್ಯಾಗ್ ಕೇವಲ 300 500ಕ್ಕೆ ಮಾರಾಟವಾಗುತ್ತಿದೆ. ಹೆಚ್ಚು ಈರುಳ್ಳಿ ಮಾರುಕಟ್ಟೆಗೆ ಬರುತ್ತಿರುವ ಕಾರಣ ಬೆಲೆ ಕುಸಿತ ಉಂಟಾಗಿದ್ದು ರೈತರು ಅಪಾರ ನಷ್ಟ ಅನುಭವಿಸುತ್ತಿದ್ದಾರೆ.

ತಾಲ್ಲೂಕಿನ ಬಾಲೇನಹಳ್ಳಿ, ಕುರುಡಿಹಳ್ಳಿ, ರಾಮಜೋಗಿಹಳ್ಳಿ, ಸೋಮಗುದ್ದು, ದೇವರಮರಿಕುಂಟೆ, ನಾರಾಯಣಪುರ, ದೊಡ್ಡಉಳ್ಳಾರ್ತಿ, ನೇರಲಗುಂಟೆ, ನಾಯಕನಹಟ್ಟಿ, ಗಂಜಿಗುಟೆ, ದುರ್ಗಾವರ ಮುಂತಾದ ಗ್ರಾಮದದಲ್ಲಿ ಈರುಳ್ಳಿ ಕಟಾವು ಮಾಡುತ್ತಿದ್ದು ಬೆಲೆ ಕುಸಿತದಿಂದ ತೀವ್ರ ಆಘಾತ ಕ್ಕೆ ಒಳಗಾಗಿದ್ದಾರೆ.

ಬೆಳೆ ಕಟಾವುಮಾಡಿರುವ ಬೆಳೆಗಾರರು, ಅಧಿಕ ಬೆಲೆ ನಿರೀಕ್ಷಿಸಿ ಈರುಳ್ಳಿ ಸ್ವಚ್ಛಗೊಳಿಸಿ ಚೀಲಕ್ಕೆ ತುಂಬಿ ಸಂಗ್ರಹಿಸಿಟ್ಟು ಕೊಂಡು ಮಾರಾಟಕ್ಕೆ ಕಾಯುತ್ತಿದ್ದಾರೆ. ಆದರೆ ಬೆಲೆಯೇ ಇಲ್ಲದ ಕಾರಣಮಾರಾಟಮಾಡಲು ಕಷ್ಟಪಡುವಂತಾಗಿದೆ. ಮುಕ್ತ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಇದ್ದರೂ ಅದರ ಲಾಭ ರೈತರಿಗೆ ಸಿಗದಂತಾಗಿದೆ.

ಈರುಳ್ಳಿ ಗಾತ್ರ ಮತ್ತು ಬಣ್ಣ ಬಹಳ ಉತ್ಕೃಷ್ಟವಾಗಿದೆ. ಮಹಾರಾಷ್ಟ್ರದ ನಾಸಿಕ್ಕಿಂದ ಗಡ್ಡೆ ತಂದು ಬಿತ್ತನೆಮಾಡಿದ್ದಾರೆ. ನಾಸಿಕ್ ಗಡ್ಡೆಗೆಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಇರುವ ಕಾರಣ ಸ್ಥಳೀಯ ರೈತರು ಅದೇ ಬಿತ್ತನೆ ಬೀಜ ತಂದು ನಾಟಮಾಡಿ ಬೆಳೆ ತೆಗೆದಿದ್ದಾರೆ. ಆದರೆ ಬೆಲೆ ಕುಸಿತದ ಕಾರಣದಿಂದ ನಷ್ಟ ಅನುಭವಿಸುತ್ತಿದ್ದಾರೆ.

'ಬೇಸಿಗೆಯಲ್ಲಿ ಬೆಳೆ ಬರುವುದೇ ಕಷ್ಟ. ಆ ಪರಿಸ್ಥಿತಿಯಲ್ಲೂ ಉತ್ತಮವಾಗಿ ಬೆಳೆ ತೆಗೆದಿದ್ದೇವೆ. ಗೊಬ್ಬರ ಹಾಗೂ ಕಾರ್ಮಿಕರ ಕೂಲಿ ಸೇರಿ ಪ್ರತಿ ಎಕರೆಗೆ 50000ದಿಂದ 60,000 ಬಂಡವಾಳ ಹಾಕಿ 3 ಎಕರೆ ಪ್ರದೇಶದಲ್ಲಿ ಉತ್ತಮ ಇಳುವರಿಯಲ್ಲಿ ಈರುಳ್ಳಿ ಬೆಳೆದಿದ್ದೇನೆ.ಹೊಲಕ್ಕೆ ಬಂದ ಖರೀದಿದಾರರು ಬಾಯಿಗೆ ಬಂದ ಬೆಲೆಗೆ ಕೇಳುತ್ತಾರೆ. ಯಾಕಾದರೂ ಈರುಳ್ಳಿ ಬೆಳೆದೆನೋ ಎನಿಸುತ್ತಿದೆ' ಎಂದು ದೇವರ ಮರಿಕುಂಟೆ ಗ್ರಾಮದ ಪ್ರಗತಿಪರ ರೈತ ಆರ್.ಎ.ದಯಾನಂ ದಮೂರ್ತಿ ಅಳಲು ತೋಡಿಕೊಂಡರು.

'ನಾಯಕನಹಟ್ಟಿ ತಿಪ್ಪೇಸ್ವಾಮಿ ಜಾತ್ರೆ ಹಿಂದು-ಮುಂದೆ ಅಂದರೆಮಾರ್ಚ್ ತಿಂಗಳ ಅಂತ್ಯದಲ್ಲಿ ಈ ಭಾಗದಲ್ಲಿ ಈರುಳ್ಳಿ ಬಿತ್ತನೆ ಕಾರ್ಯ ಆರಂಭವಾಗುತ್ತದೆ. ಹಿಂಗಾರು ಹಂಗಾಮಿನಲ್ಲಿ ತಡವಾಗಿ ಬಿತ್ತನೆಮಾಡಿದ ಬೆಳೆ ಈಗ ಕಟಾವಿಗೆ ಬಂದಿದೆ. ನಾಸಿಕ್‌ನಲ್ಲಿ ಬೆಳೆದ ಈರುಳ್ಳಿ ಹೆಚ್ಚಿನ ಪ್ರಮಾಣದಲ್ಲಿ ಮಾರುಕಟ್ಟೆಗೆ ಬರುವುದರಿಂದ ಈ ಪ್ರದೇಶದಲ್ಲಿ ಬೆಳೆದ ಬೆಳೆಗೆ ಉತ್ತಮ ಬೆಲೆ ಸಿಗುವುದಿಲ್ಲ' ಎಂದು ತೋಟಗಾರಿಕಾ ಹಿರಿಯ ಸಹಾಯಕ ನಿರ್ದೇಶಕ ವಿರೂಪಾಕ್ಷಪ್ಪ ಹೇಳಿದರು.

'ಚಳ್ಳಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಹಿಂಗಾರು ಹಂಗಾಮಿನ ಈರುಳ್ಳಿ ಬೆಳೆ ಎಷ್ಟು ಬಂದಿದೆ ಎಂಬಮಾಹಿತಿ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಇಲ್ಲ. ಅವರು ಕಚೇರಿಯಲ್ಲಿ ಕುಳಿತು ಈರುಳ್ಳಿ ಕಡಿಮೆ ಇದೆ ಎನ್ನುತ್ತಾರೆ. ಅವರು ರೈತರ ಜಮೀನುಗಳಿಗೆ ಹೋಗಿ ನೋಡಲಿ. ಆಗ ಬೆಲೆ ಕುಸಿತದಿಂದ ಬೆಳೆಗಾರರು ಅನುಭವಿಸುತ್ತಿರುವ ಕಷ್ಟ ಅವರಿಗೆ ತಿಳಿಯುತ್ತದೆ ಎಂದು ರೈತ ತಿಪ್ಪೇಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದರು.

## ನ್ಯಾಯಾಲಯದ ಆದೇಶ ಫಲಕ ಧ್ವಂಸ, ಕಂಗಲಾದ ದಂಪತಿ




**ಭದ್ರಾವತಿ:** ಸರ್ಕಾರದಿಂದ ಮಂಜೂರಾಗಿರುವ ಸಾಗುವಳಿ ಜಮೀನನ್ನು ಮೂಲ ಫಲಾನುಭವಿ ದಂಪತಿಗೆ ವಂಚಿಸಿ ದೌರ್ಜನ್ಯ, ದಬ್ಬಾಳಿಕೆ ಹಾಗು ಕುತಂತ್ರದ ಮೂಲಕ ವಶಕ್ಕೆ ಪಡೆಯಲು ಯತ್ನಿಸುತ್ತಿರುವ ಘಟನೆ ನಡೆದಿದ್ದು, ಇದರಿಂದಾಗಿ ಬಡ ಕುಟುಂಬದವರು ಅತಂತ್ರರಾಗಿದ್ದಾರೆ.

ತಾಲೂಕಿನ ಹುಳಿಯಾರ್ ರಾಮನಕೊಪ್ಪ ಗ್ರಾಮದ ಸರ್ವೆ ನಂ. 15ರಲ್ಲಿ 4 ಎಕರೆ ವಿಸ್ತೀರ್ಣದ ಜಮೀನನ್ನು 22 ಮಾರ್ಚ್, 2018ರಲ್ಲಿ ಗ್ರಾಮದ ನಿವಾಸಿ ಕೃಷ್ಣಪ್ಪ ಮತ್ತು ಇವರ ಪತ್ನಿ ಸಣ್ಣಮ್ಮ ಅವರಿಗೆ ಸಾಗುವಳಿಗಾಗಿ ಕೆಲ ಷರತ್ತಿನೊಂದಿಗೆ ಜಂಟಿ ಖಾತೆಯಲ್ಲಿ ಮಂಜೂರು ಮಾಡಿದ್ದು, ಅದರಂತೆ 2024-25ನೇ ಸಾಲಿನ ಪಹಣಿ ಪ್ರತಿಯಲ್ಲೂ ಸಹ ಸ್ಪಷ್ಟವಾಗಿ ನಮೂದಾಗಿದೆ. ಅಲ್ಲದೆ ಪ್ರಸ್ತುತ ಜಮೀನು ಸಾಗುವಳಿ ಮಾಡಲಾಗುತ್ತಿರುತ್ತದೆ.

ಈ ನಡುವೆ ಇದೆ ಸರ್ವೆ ನಂ. ಜಮೀನು ವಿಭಾಗಿಸಿ 1996-97ನೇ ಸಾಲಿನಲ್ಲಿ ದರಖಾಸ್ತು ಮೂಲಕ ವೆಂಕಟೇಶ ಅವರಿಗೆ 3 ಎಕರೆ ಜಮೀನು ಹಾಗು ಇವರ ಪತ್ನಿ ನಂಜಮ್ಮ ಅವರಿಗೆ 3 ಎಕರೆ ಜಮೀನು ಮಂಜೂರಾತಿ ಮಾಡಲಾಗಿದೆ. ಅಲ್ಲದೆ 1996-97ನೇ ಸಾಲಿನಲ್ಲಿ ಸಾಗುವಳಿ ನೀಡಿ ಪ್ರಸ್ತುತ ಪಹಣಿ ಸಹ ಚಾಲ್ತಿಯಲ್ಲಿದೆ. ಆದರೆ ಮಂಜೂರಾದ ಜಮೀನು ವೆಂಕಟೇಶ್ ಮತ್ತು ಇವರ ಪತ್ನಿ ನಂಜಮ್ಮ ಅವರ ಅನುಭವದಲ್ಲಿ ಇರುವುದಿಲ್ಲ.

ಇದೊಂದು ವಿಚಿತ್ರ ಪ್ರಕರಣವಾಗಿದ್ದು, ಈ ಸಂಬಂಧ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರು ಪ್ರಕರಣದ ದಾಖಲಾತಿಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ ಕಾನೂನು ಅಭಿಪ್ರಾಯ ಸೂಚಿಸಿದ್ದು, ಕೃಷ್ಣಪ್ಪ ಮತ್ತು ಇವರ ಪತ್ನಿ ಸಣ್ಣಮ್ಮ ದಂಪತಿ ಜಮೀನಿನ ಜಂಟಿ ಮಾಲೀಕರಾಗಿದ್ದಾರೆಂದು ತಿಳಿಸಿದೆ. ಈ ನಡುವೆ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ಶಾಶ್ವತ ನಿರ್ಬಂಧಕ ತಡೆಯಾಜ್ಞೆ ನೀಡಿದೆ.

ಇದೀಗ ಜಮೀನನ್ನು ದೌರ್ಜನ್ಯ, ದಬ್ಬಾಳಿಕೆ ಹಾಗು ಕುತಂತ್ರದ ಮೂಲಕ ವಶಕ್ಕೆ ಪಡೆಯಲು ಮುಂದಾಗಿದ್ದು, ಇದರಿಂದಾಗಿ ಕೃಷ್ಣಪ್ಪ ಮತ್ತು ಇವರ ಪತ್ನಿ ಸಣ್ಣಮ್ಮ ರಕ್ಷಣೆ ಕೋರಿದ್ದರು. ತಾಲೂಕು ಆಡಳಿತ ದಂಪತಿಗೆ ರಕ್ಷಣಾ ' ನೀಡಲು ಮುಂದಾಗಿದೆ. ಈ ನಡುವೆ ತಾಲೂಕು ಆಡಳಿತ ಜಮೀನಿನ ಸರ್ವೆ ನಡೆಸಿ 4 ಎಕರೆ ಜಮೀನು ಗುರುತಿಸಿದೆ. ಇಷ್ಟೆಲ್ಲಾ ಬೆಳವಣಿಗೆಗಳ ನಡುವೆ ಕಳೆದ 3-4 ದಿನಗಳ ಹಿಂದೆ ಜಮೀನಿನಲ್ಲಿ ಅಳವಡಿಸಲಾಗಿರುವ ನ್ಯಾಯಾಲಯದ ಆದೇಶದ ಫಲಕ ಧ್ವಂಸಗೊಳಿಸಿ ಜೆಸಿಬಿ ಹಾಗು ಟ್ರ್ಯಾಕ್ಟರ್ ಇನ್ನಿತರ ವಾಹನಗಳನ್ನು ಬಳಸಿ ಅಕ್ರಮವಾಗಿ ಜಮೀನು ಪ್ರವೇಶಿಸಿ ದೌರ್ಜನ್ಯ, ದಬ್ಬಾಳಿಕೆ ನಡೆಸಲಾಗಿದೆ. ಇದರಿಂದಾಗಿ ಬಡ ಕುಟುಂಬಕ್ಕೆ ದಾರಿ ದೋಚದಂತಾಗಿದೆ. ಈ ಪ್ರಕರಣವನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ಮಧ್ಯ ಪ್ರವೇಶಿಸಿ ನ್ಯಾಯ ದೊರಕಿಸಿ ಕೊಡಬೇಕಾಗಿದೆ.

## ಭಾರತದೊಂದಿಗೆ ಉತ್ತಮ ಬಾಂಧವ್ಯವಿದೆ, ಗೆಳೆಯನಾದರೂ ವಿಶ್ವದಲ್ಲೇ ಅತಿ ಹೆಚ್ಚು ಸುಂಕ ವಿಧಿಸುವ ಕ್ರಮ ಒಪ್ಪಲ್ಲ: ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್:** ನಮಗೆ ಭಾರತದೊಂದಿಗೆ 'ಉತ್ತಮ ಬಾಂಧವ್ಯ' ಇದೆ, ಆದರೆ, ಆ ದೇಶದೊಂದಿಗೆ ಅವರಿಗೆ ಇರುವ 'ಏಕೈಕ ಸಮಸ್ಯೆ' ಎಂದರೆ 'ವಿಶ್ವದ ಅತಿ ಹೆಚ್ಚು ಸುಂಕ ವಿಧಿಸುವ ರಾಷ್ಟ್ರವಾಗಿರುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೇಳಿದ್ದಾರೆ.

ಅಮೆರಿಕದ ಸುದ್ದಿ, ಅಭಿಪ್ರಾಯ ಮತ್ತು ವ್ಯಾಖ್ಯಾನ ವೆಬ್‌ಸೈಟ್ ಬ್ರೈಟ್ಬಾರ್ಟ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ, ಟ್ರಂಪ್ ಅವರು ಭಾರತದೊಂದಿಗಿನ ಅಮೆರಿಕದ ಸಂಬಂಧದ ಕುರಿತು ಮಾತನಾಡಿದ್ದಾರೆ.

ಪ್ರಧಾನಿ ಮೋದಿ ಜೊತೆಗಿನ ಇತ್ತೀಚಿನ ಭೇಟಿ ಉಲ್ಲೇಖಿಸಿ ಮಾತನಾಡಿರುವ ಅವರು, ನನಗೆ ಭಾರತದೊಂದಿಗೆ ಉತ್ತಮ ಬಾಂಧವ್ಯವಿದೆ, ಆದರೆ, ವಿಶ್ವದ ಅತಿ ಹೆಚ್ಚು ಸುಂಕ ವಿಧಿಸುವ ರಾಷ್ಟ್ರವಾಗಿರುವುದು ನನಗಿರುವ ಸಮಸ್ಯೆಯಾಗಿದೆ ಎಂದು ಹೇಳಿದರು.

ಭಾರತ ಗಣನೀಯವಾಗಿ ಸುಂಕ ತಗ್ಗಿಸಲಿದೆ ಎಂದು ಭಾವಿಸುತ್ತೇನೆ. ಆದರೆ, ಏಪ್ರಿಲ್ 2ರಿಂದ ಜಾರಿಗೆ ಬರುವಂತೆ ಭಾರತ ವಿಧಿಸುವಷ್ಟೇ ಸುಂಕವನ್ನು ನಾವೂ ವಿಧಿಸಲಿದ್ದೇವೆ ಎಂದು ತಿಳಿಸಿದರು.

ಭಾರತ-ಮಧ್ಯಪ್ರಾಚ್ಯ-ಯುರೋಪ್-ಆರ್ಥಿಕ ಕಾರಿಡಾರ್ (ಖಒಇಅ) ಕುರಿತು ಮಾತನಾಡಿ, ವ್ಯಾಪಾರ-ವಹಿವಾಟಿನಲ್ಲಿ ನಮಗೆ ಹಾನಿ ಮಾಡಲು ಬಯಸುವ ಇತರ ದೇಶಗಳನ್ನು ಎದುರಿಸಲು ಒಟ್ಟಾಗಿ ಕೆಲಸ ಮಾಡುವ ಪ್ರಬಲ ರಾಷ್ಟ್ರಗಳ ಗುಂಪು ಇದಾಗಿದೆ ಎಂದು ಹೇಳಿದರು.

ಸ್ನೇಹ ರಾಷ್ಟ್ರಗಳನ್ನು ಕೆಟ್ಟದಾಗಿ ನಡೆಸಿಕೊಳ್ಳುವುದು ನಮಗೆ ಇಷ್ಟವಿಲ್ಲ. ಆದರೆ, ಉತ್ತಮ ಗೆಳೆಯನಾದರೂ ಭಾರತದ ಸುಂಕದ ಕ್ರಮ ಒಪ್ಪುವಂತದ್ದಲ್ಲ. ಕೆಲವು ಸಂದರ್ಭಗಳಲ್ಲಿ ನಮಗೆ ಸ್ನೇಹಪರವಾಗಿರದವರು ಸ್ನೇಹಪರವಾಗಿರಬೇಕಾದ ಯುರೋಪಿಯನ್ ಒಕ್ಕೂಟದಂತೆ ನಮ್ಮನ್ನು ವ್ಯಾಪಾರದಲ್ಲಿ ಕೆಟ್ಟದಾಗಿ ನಡೆಸಿಕೊಳ್ಳುತ್ತಾರೆ. ಭಾರತ ಮತ್ತು ಇತರೆ ಎಲ್ಲಾ ರಾಷ್ಟ್ರಗಳು ನಮ್ಮನ್ನು ಮಿತ್ರ ರಾಷ್ಟ್ರವೆಂದು ಬಯಸುತ್ತಾರೆ. ನಾನೂ ಇತರರಿರೂ ಅದೇ ರೀತಿ ಹೇಳಬಲ್ಲೆ. ಆದರೆ, ವಿಚಾರದಲ್ಲಿ ಭಾರತವನ್ನು ಒಪ್ಪಲ್ಲ. ಏ.2ರಿಂದ ಜಾರಿಗೆ ಬರುವಂತೆ ಭಾರತ ವಿಧಿಸಲಿರುವ ಸುಂಕಕ್ಕೆ ಅನುಗುಣವಾಗಿ ಅಮೆರಿಕಾ ಭಾರತದ ಉತ್ಪನ್ನಗಳಿಗೂ ಸುಂಕ ವಿಧಿಸುತ್ತದೆ ಎಂದು ಪುನರುಚ್ಚರಿಸಿದ್ದಾರೆ.

ಕಳೆ ದಿನಗಳ ಹಿಂದಷ್ಟೇ ಡೊನಾಲ್ಡ್ ಟ್ರಂಪ್ ಅವರು ಭಾರತದ "ಸುಂಕಗಳ" ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದರು. ನೀವು ಭಾರತದಲ್ಲಿ ಏನನ್ನೂ ಮಾರಾಟ ಮಾಡಲು ಸಾಧ್ಯವಿಲ್ಲ, ಅದು ಬಹುತೇಕ ನಿರ್ಬಂಧಿತವಾಗಿದೆ," ಎಂದು ಹೇಳಿದ್ದರು. ಆದರೆ , ನೆಗೂ ಸುಂಕ ಕಡಿತಕ್ಕೆ ಭಾರತ ಒಪ್ಪಿದ್ದು, ಅವರ ಕೆಲಸ ಬಹಿರಂಗ ಮಾಡುತ್ತಿರೋದ್ರಿಂದ ಈ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಹೇಳಿಕೆ ನೀಡಿದ್ದರು.

ಇದನ್ನು ಭಾರತ ನಿರಾಕರಿಸಿತ್ತು. ಸರ್ಕಾರ ಈ ರೀತಿಯ ಯಾವುದೇ ನಿರ್ಧಾರವನ್ನು ದೇಶ ತೆಗೆದುಕೊಂಡಿಲ್ಲ. ತೆರಿಗೆ ಕಡಿತ ಮಾಡಿಲ್ಲ ಎಂದು ಪಾರ್ಲಿಮೆಂಟರಿ ಪ್ಯಾನಲ್‌ನಲ್ಲಿ ಹೇಳಿತ್ತು. ಅಲ್ಲದೆ ಸಪ್ಟೆಂಬರ್ ವರೆಗೆ ತೆರಿಗೆ ಪದ್ಧತಿಯ ಕುರಿತು ನಿರ್ಧಾರಕ್ಕೆ ಬರಲು ಸಮಯಾವಕಾಶ ಕೇಳಲಾಗಿದೆ ಎಂದೂ ತಿಳಿಸಿತ್ತು.

ಟ್ರಂಪ್ ಎರಡನೇ ಅವಧಿಯಲ್ಲಿ ಅಮೋರಿಕಾ ಅಧಿಕಾರ ಸ್ವೀಕರಿಸಿದ ಬಳಿಕ, ಜಾಗತಿಕ ವ್ಯವಹಾರದಲ್ಲಿ ಅಲ್ಲೋಲ ಕಲ್ಲೋಲ ಉಂಟಾಗಿದೆ. ನಿರಂತರವಾಗಿ ಭಾರತದ ತೆರಿಗೆ ಪದ್ಧತಿಯ ವಿರುದ್ಧ ಹೇಳಿಕೆಗಳನ್ನು ಕೊಡುತ್ತಲೇ ಬಂದಿದ್ದಾರೆ. ಅಲ್ಲದೆ ಸುಂಕ ಕಡಿತಕ್ಕೆ ಒತ್ತಡ ಹೇರುತ್ತಿದ್ದಾರೆ.

ಅಮೆರಿಕದ ಅಧಿಕಾರ ವಹಿಸಿದ ಬಳಿಕ ಮಿತ್ರ ಹಾಗೂ ಶತ್ರು ರಾಷ್ಟ್ರಗಳನ್ನು ಗುರಿಯಾಗಿಸಿ ಅವರ ನೀತಿಗಳು ಬದಲಾಗುತ್ತಿವೆ. ಅಮೆರಿಕದ ಜೊತೆಗೆ ವಾಣಿಜ್ಯ ವಹಿವಾಟಿನಲ್ಲಿರುವ ದೇಶಗಳಿಂದ ಅನ್ಯಾಯದ ವ್ಯಾಪಾರ ಆಗುತ್ತಿದೆ ಎಂದು ಘೋಷಿರುವ ಟ್ರಂಪ್, ಭಾರತ ಸೇರಿದಂತೆ ಹಲವು ದೇಶಗಳ ಮೇಲೆ ಪ್ರತೀಕಾರದ ತೆರಿಗೆಯನ್ನು

## ಬೆಳ್ಳಂಬೆಳಿಗ್ಗೆ ಬೆಂಗಳೂರಿಗರಿಗೆ ತಂಪೆರೆದ ಮಳೆರಾಯ

**ಬೆಂಗಳೂರು:** ನಗರದಲ್ಲಿ ಇಂದು ಬೆಳ್ಳಂಬೆಳಿಗ್ಗೆ ಬೆಂಗಳೂರಿನ ನಾನಾ ಭಾಗಗಳಲ್ಲಿ ಮಳೆ ಆಗಿದ್ದು,ಬಿಸಿಲ ಬೇಗೆಯಿಂದ ಬಳಲುತ್ತಿದ್ದ ಜನರಿಗೆ ತಂಪು ನೀಡಿದೆ. ದಿನೇ ದಿನೇ ಬಿಸಿಲಿನ ತಾಪಮಾನ ಹೆಚ್ಚುತ್ತಿದ್ದ ಹಿನ್ನೆಲೆಯಲ್ಲಿ ವಾಯುಭಾರ ಕುಸಿತಗೊಂಡು ಮಳೆ ಸುರಿದಿದೆ. ಇನ್ನೂ ಎರಡು ಮೂರು ದಿನಗಳ ಕಾಲ ಮಳೆ ಬೀಳುವ ಸಾಧ್ಯತೆಯಿದೆ.

ಕೆಂಪೇಗೌಡ ವಿಮಾನ ನಿಲ್ದಾಣ ರಸ್ತೆ ಯಶವಂತಪುರ, ಜಯನಗರ, ಕೆ.ಆರ್‌ಪುರಂ ಸೇರಿದಂತೆ ಹಲವಾರು ಕಡೆ ಸುಮಾರು ಅರ್ಧಗಂಟೆ ಕಾಲ ರಸ್ತೆಯಲ್ಲಿ ನೀರು ನಿಂತು ಪ್ರಯಾಣಿಕ ಸಾಗಿದ ಘಟನೆ ನಡೆದಿದೆ.

ರಾಜ್ಯದ ನಾನಾ ಭಾಗಗಳಲ್ಲೂ ಮಳೆಯಾಗಿದ್ದು, ಭೂಮಿ ತಂಪಾಗಿದೆ.ರಾಜಧಾನಿಯಲ್ಲಿ ಬೆಳಿಗ್ಗೆ ವರುಣನ ಆಗಮನ ಜನರಿಗೆ ಖುಷಿ ನೀಡಿದೆ. ಕೆಲವವರು ಮಳೆಯಲ್ಲೇ ನೆನೆದು ಸಂಚರಿಸುತ್ತಿದ್ದದು ಕಂಡುಬಂದಿತು. ಒಟ್ಟಾರೆ ಗರಿಷ್ಠ 32 ಡಿಗ್ರಿ ತಾಪಮಾನ ತಲುಪಿದ್ದ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿರುವುದರಿಂದ ತಾಪಮಾನ ಕುಸಿದಿದ್ದು, ತಂಪಾದ ವಾತಾವರಣ ತಂದಿದೆ.

## ಜಲಾಶಯ ನೋಡಲೆಂದು ಬಂದ ಮೂವರು ಪ್ರವಾಸಿಗರು ನೀರಿನಲ್ಲಿ ಮುಳುಗಿ ಸಾವು

**ಚಿಕ್ಕಬಳ್ಳಾಪುರ:** ಇಲ್ಲಿನ ಶ್ರೀನಿವಾಸ ಸಾಗರ ಜಲಾಶಯದ ನೀರಿನಲ್ಲಿ ಮೂವರು ಮುಳುಗಿ ಸಾವನ್ನಪ್ಪಿದ ಹೃದಯ ವಿದ್ರಾವಕ ಘಟನೆ ನಡೆದಿದೆ. ಜಲಾಶಯ ನೋಡಲೆಂದು ಆಗಮಿಸಿದ್ದ ಬೆಂಗಳೂರು ಮೂಲದ ಬಶೀರ್ (43), ಪರ್ಹಿನ್ (45) ಹಾಗೂ ಇಮ್ರಾನ್ (45) ಸಾವನ್ನಪ್ಪಿದ ದುರ್ದೈವಿಗಳು ಎಂದು ಗುರುತಿಸಲಾಗಿದೆ.

**ಘಟನೆಯ ವಿವರ :**

ರಂಜಾನ್ ಹಬ್ಬದ ನಂತರ ಕುಟುಂಬ ಸಮೇತರಾಗಿ ತಾಲೂಕಿನ ವಿವಿಧ ಕಡೆ ಪ್ರವಾಸಕ್ಕೆಂದು ಆಗಮಿಸಿದ್ದ ಇವರು ತಾಲೂಕಿನ ಶ್ರೀನಿವಾಸ ಸಾಗರ ಜಲಾಶಯ ನೋಡಲೆಂದು ಆಗಮಿಸಿದ್ದ ವೇಳೆ ಇಬ್ಬರು ಮಹಿಳೆಯರು ಹಾಗೂ ಓರ್ವ ಪುರುಷ ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ಮೂವರ ಮೃತ ದೇಹಗಳನ್ನು ಚಿಕ್ಕಬಳ್ಳಾಪುರ ಜಿಲ್ಲಾ ಆಸ್ಪತ್ರೆಯ ಶವಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಯಿತು. ಈ ಸಂಬಂಧ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಭಾರತಕ್ಕೆ ಮುಳುವಾದ ಟ್ರಂಪ್ : ಶೇ.26 ರಷ್ಟು ಸುಂಕ ಹೇರಿಕೆ, ಅರ್ಥಿಕತೆಗೆ ಪೆಟ್ಟು ಬೀಳುವ ಸಾಧ್ಯತೆ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತ ಸೇರಿದಂತೆ ವಿಶ್ವದ ಬಹುತೇಕ ಎಲ್ಲಾ ದೇಶಗಳ ಮೇಲೆ ಶೇ 26 ರಷ್ಟು ಪ್ರತಿ ಸುಂಕ ವಿಧಿಸಿದ್ದಾರೆ. ಇದು ದೇಶದ ಅರ್ಥಿಕತೆ ಮೇಲೆ ಪರಿಣಾಮ ಬೀರುವ ಸಾಧ್ಯತೆಗಳಿವೆ.

ಇದರಿಂದ ಭಾರತವು ಜವಳಿ, ರಾಸಾಯನಿಕಗಳು, ಔಷಧಗಳು ಮತ್ತು ಕೃಷಿ ಉತ್ಪನ್ನಗಳು ಸೇರಿದಂತೆ ವ್ಯಾಪಕ ಶ್ರೇಣಿಯ ಸರಕುಗಳನ್ನು ಅಮೆರಿಕಕ್ಕೆ ರಫ್ತು ಮಾಡುತ್ತದೆ. ಕೆಲವು ವಲಯಗಳಿಗೆ ಟ್ರಂಪ್ ಅವರ ಸುಂಕಗಳಿಂದ ನೇರವಾಗಿ ಪರಿಣಾಮ ಬೀರಿದರೆ, ಇತರ ಕೆಲವು ವಸ್ತುಗಳು ಪರೋಕ್ಷ ಪರಿಣಾಮ ಬೀರಲಿವೆ.

ಭಾರತದ ಕೃಷಿ ರಫ್ತಿನ ಮೇಲೆ ಅಮೆರಿಕದ ಸುಂಕದ ಪರಿಣಾಮದಿಂದ ಅಕ್ಕಿ, ಮಸಾಲೆಗಳು ಮತ್ತು ಚಹಾದಂತಹ ಕೃಷಿ ಉತ್ಪನ್ನಗಳನ್ನು ರಫ್ತು ಮಾಡುವುದರಿಂದ ಭಾರತದಿಂದ ಕೆಲವು ಕೃಷಿ ಸರಕುಗಳ ಮೇಲೆ, ವಿಶೇಷವಾಗಿ ಉಕ್ಕು ಮತ್ತು ಅಲ್ಯೂಮಿನಿಯಂ ಮೇಲೆ ಸುಂಕ ವಿಧಿಸಲಾಗುತ್ತಿದೆ.

ಭಾರತವು ಜೆನೆರಿಕ್ ಔಷಧಗಳಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿದೆ, ಮತ್ತು ಅದು ಅಮೆರಿಕಕ್ಕೆ ಅನೇಕ ಔಷಧಿಗಳನ್ನು ರಫ್ತು ಮಾಡುತ್ತದೆ ಟ್ರಂಪ್ ಅವರ ಸುಂಕಗಳು ಭಾರತೀಯ ಔಷಧ ಉತ್ಪನ್ನಗಳನ್ನು ನೇರವಾಗಿ ಗುರಿಯಾಗಿಸಿಕೊಂಡಿಲ್ಲ, ಆದರೆ ಕಚ್ಚಾ ವಸ್ತುಗಳು ಅಥವಾ ಮಧ್ಯಂತರ ಸರಕುಗಳ ಮೇಲಿನ ಸುಂಕ ಹೆಚ್ಚಳದಂತಹ ವ್ಯಾಪಾರ ಸಂಬಂಧಗಳಲ್ಲಿನ ಯಾವುದೇ ಅಡಚಣೆಯು ವೆಚ್ಚಗಳು ಮತ್ತು ಬೆಲೆಗಳ ಮೇಲೆ ಪರಿಣಾಮ ಬೀರಲಿವೆ.

ಇದು ಅಮೆರಿಕದ ಗ್ರಾಹಕರಿಗೆ ಬೆಲೆಗಳನ್ನು ಹೆಚ್ಚಿಸುವ ಮತ್ತು ಭಾರತೀಯ ರಫ್ತಿಗೆ ಬೇಡಿಕೆಯನ್ನು ಕಡಿಮೆ ಮಾಡುವ ಸಾಧ್ಯತೆಯಿದೆ. ಯಾವ್ಯಾವ ದೇಶಕ್ಕೆ ಎಷ್ಟು ಸುಂಕ; ಕಾಂಬೋಡಿಯಾ ಶೇ. 49. ಲಾವೋಸ್ ಶೇ. 48. ಮಡಗಾಸ್ಕರ್ ಶೇ. 47. ವಿಯೆಟ್ನಾಂ ಶೇ. 46, ಶ್ರೀಲಂಕಾ ಮತ್ತು ಮ್ಯಾನ್ಮಾರ್ ತಲಾ ಶೇ. 44. ಬೋಟಾನಾ ಶೇ. 37, ಥೈಲ್ಯಾಂಡ್ ಶೇ. 36, ಚೀನಾ ಶೇ. 34. ತೈವಾನ್ ಮತ್ತು ಇಂಡೋನೇಷ್ಯಾ ಶೇ. 32 ಮತ್ತು ಸ್ವಿಟ್ಜರ್ಲೆಂಡ್ ಶೇ. 31 ರಷ್ಟು ಸುಂಕವನ್ನು ಎದುರಿಸುತ್ತಿವೆ. ಯುರೋಪಿಯನ್ ಒಕ್ಕೂಟದ ಮೇಲೆ ಶೇ 20. ಯುಕೆ ಮೇಲೆ ಶೇ 10 ಮತ್ತು ಜಪಾನ್ ಮೇಲೆ ಶೇ 24 ರಷ್ಟು ಸುಂಕ ಹಾಗೂ ಭಾರತದ ಮೇಲೆ ಶೇ.26 ರಷ್ಟು ಸುಂಕ ವಿಧಿಸಿದ್ದಾರೆ.ಇನ್ನು ಭಾರತ ಅಮೆರಿಕಕ್ಕೆ ಮಾಡುವ ಅತಿ ದೊಡ್ಡ ರಫ್ತು ಎಲೆಕ್ಟ್ರಾನಿಕ್ಸ್ ವಸ್ತುಗಳಿಗೆ ಅಮೆರಿಕ ಅತಿ ಹೆಚ್ಚಿನ ಸುಂಕ ವಿಧಿಸುವ ಬೆದರಿಕೆ ಹಾಕಿದೆ.

2024 ಹಣಕಾಸು ವರ್ಷದಲ್ಲಿ ಅಮೆರಿಕಕ್ಕೆ ಭಾರತದ ಎಲೆಕ್ಟ್ರಾನಿಕ್ಸ್ ರಫ್ತು ಒಟ್ಟು 11.1 ಬಿಲಿಯನ್ ಡಾಲರ್ ಆಗಿದ್ದು, ಅಮೆರಿಕಕ್ಕೆ ದೇಶದ ಒಟ್ಟು ರಫ್ತನ ಶೇ.14ರಷ್ಟಿದೆ. ಪ್ರತಿಯಾಗಿ, ಅಮೆರಿಕವು ಭಾರತದ ಎಲೆಕ್ಟ್ರಾನಿಕ್ಸ್ ರವಿನಲ್ಲಿ 32% ರಷ್ಟಿದೆ. 9% ರಷ್ಟು ವಲಯ ಸುಂಕ ವ್ಯತ್ಯಾಸವು ಈ ಉದ್ಯಮದ ಮೇಲೆ ತೀವ್ರ ಪರಿಣಾಮ ಬೀರಬಹುದು.ಭಾರತವು ಜಾಗತಿಕವಾಗಿ ಮುಂಚೂಣಿಯಲ್ಲಿರುವ ವಲಯವಾದ ರತ್ನಗಳು ಮತ್ತು ಆಭರಣಗಳು ಗಮನಾರ್ಹ ಅಪಾಯದಲ್ಲಿದೆ.

ಈ ವರ್ಗದಲ್ಲಿ ಭಾರತದ ಒಟ್ಟು 33 ಶತಕೋಟಿ ಡಾಲರ್ ರಫ್ತಿನಲ್ಲಿ ಯುಎಸ್ 30% (9.9 ಶತಕೋಟಿ ಡಾಲರ್) ಪಾಲನ್ನು ಹೊಂದಿದೆ. ಇದರಲ್ಲಿ ಕತ್ತರಿಸಿದ ಮತ್ತು ಪಾಲಿಶ್ ಮಾಡಿದ ವಜ್ರಗಳು, ಸ್ಟಡ್ಸ್ ಚಿನ್ನದ ಆಭರಣಗಳು ಮತ್ತು ಪ್ರಯೋಗಾಲಯದಲ್ಲಿ ಬೆಳೆದ ವಜ್ರಗಳು ಸೇರಿವೆ.ಭಾರತದಿಂದ ಅಮೆರಿಕಕ್ಕೆ ಜವಳಿ ಮತ್ತು ಉಡುಪು ರಫ್ತುಗಳು ಕಳೆದ ವರ್ಷ ಒಟ್ಟು 9.6 ಬಿಲಿಯನ್ ಡಾಲರ್ ಆಗಿದ್ದು, ಇದು ಉದ್ಯಮದ ಒಟ್ಟು ರಫ್ತಿನ 28% ರಷ್ಟಿದೆ.

ಈ ವಲಯವು ಬಾಂಗ್ಲಾದೇಶ ಮತ್ತು ವಿಯೆಟ್ನಾಂನಂತಹ ದೇಶಗಳಿಂದ ಸ್ಪರ್ಧೆಯನ್ನು ಎದುರಿಸುತ್ತಿದೆ. ಇದು ಸುಂಕಗಳಿಂದಾಗಿ ಭಾರತೀಯ ಸರಕುಗಳು ಹೆಚ್ಚು ದುಬಾರಿಯಾದರೆ ವೆಚ್ಚದ ಪ್ರಯೋಜನವನ್ನು ಪಡೆಯಬಹುದು. ಭಾರತದ ಯಾವ ರಫ್ತು ವಲಯಗಳಿಗೆ ಹೊಡೆತ ಬೀಳಲಿದೆ? ಎಲ್ಲಾ ವಲಯಗಳ ಮೇಲೆ ಶೇಕಡಾ 26 ರಷ್ಟು ಪರಸ್ಪರ ಸುಂಕದ ಪರಿಣಾಮ ಬೀರುತ್ತದೆ.

ಇವುಗಳಲ್ಲಿ ಮಾಂಸ, ಮೀನು ಮತ್ತು ಸಮುದ್ರಾಹಾರ: ಸಂಸ್ಕರಿಸಿದ ಆಹಾರ, ಸಕ್ಕರೆ ಮತ್ತು ಕೋಕೋ, ಧಾನ್ಯಗಳು, ತರಕಾರಿಗಳು, ಹಣ್ಣುಗಳು ಮತ್ತು ಮಸಾಲೆಗಳು: ಡೈರಿ ಉತ್ಪನ್ನಗಳು, ಖಾದ್ಯ ತೈಲಗಳು, ಜೆನೆರಿಕ್ ಔಷಧಿಗಳು, ವಿಶೇಷ ಔಷಧಗಳು ಮತ್ತು ಇತರ ಔಷಧೀಯ ಉತ್ಪನ್ನಗಳು; ವಜ್ರಗಳು, ಚಿನ್ನ ಮತ್ತು ಬೆಳ್ಳಿ: ವಿದ್ಯುತ್, ದೂರಸಂಪರ್ಕ ಮತ್ತು ಎಲೆಕ್ಟ್ರಾನಿಕ್ಸ್, ರಾಸಾಯನಿಕಗಳು (ಫಾರ್ಮಾ ಹೊರತುಪಡಿಸಿ): ಜವಳಿ, ಬಟ್ಟೆಗಳು, ನೂಲು ಮತ್ತು ಕಾರ್ಪೆಟ್ ಗಳು: ಟೈರ್‌ಗಳು ಮತ್ತು ಬೆಲ್ಟಳು ಸೇರಿದಂತೆ ರಬ್ಬರ್ ಉತ್ಪನ್ನಗಳು: ಸೆರಾಮಿಕ್, ಗಾಜು ಮತ್ತು ಕಲ್ಲಿನ ಉತ್ಪನ್ನಗಳು: ಪಾದರಕ್ಷೆಗಳು; ಮತ್ತು ಆಟೋಮೊಬೈಲ್ ಮತ್ತು ಆಟೋ ಘಟಕಗಳು ಸೇರಿವೆ

## ಆಕಾಶವಾಣಿಯಲ್ಲಿ ಜಿಲ್ಲಾ ಪ್ರವಾಸಿ ತಾಣಗಳ ವಿಶೇಷ ಕಾರ್ಯಕ್ರಮ ಸರಣಿ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆ ಪ್ರವಾಸಿಗರ ಸ್ವರ್ಗ, ಶಿವಮೊಗ್ಗ ಜಿಲ್ಲೆಯಾದ್ಯಂತ ಹಲವಾರು ಪ್ರವಾಸಿತಾಣಗಳಿದ್ದು ಈ ಎಲ್ಲಾ ಪ್ರವಾಸಿ ತಾಣಗಳ ಪರಿಚಯವನ್ನು ಸಾರ್ವಜನಿಕರಿಗೆ ತಿಳಿಸಲು ಜಿಲ್ಲಾ ಪ್ರವಾಸಿತಾಣಗಳ ವಿಶೇಷ ಕಾರ್ಯಕ್ರಮ ಸರಣಿ ಪ್ರತಿ ಗುರುವಾರ ಬೆಳಿಗ್ಗೆ 7.15 ಕ್ಕೆ ಆಕಾಶವಾಣಿ ಭದ್ರಾವತಿಯಲ್ಲಿ ಪ್ರಸಾರವಾಗಲಿದೆ.

ಶಿವಮೊಗ್ಗದ ಕರ್ನಾಟಕ ಸಂಘದ ಮಾಜಿ ಅಧ್ಯಕ್ಷರಾದ ಎಂ.ಎನ್.ಸುಂದರರಾಜ್ ಅವರು ವಿವಿಧ ಪ್ರವಾಸಿತಾಣಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ. ಈ ಸರಣಿ ದಿ: 03-04-2025 ರಿಂದ ಆರಂಭಗೊಳ್ಳುತ್ತದೆ. ಈ ಎಲ್ಲಾ ಕಾರ್ಯಕ್ರಮ ಸಾರ್ವಜನಿಕರಿಗೆ ಮಾಹಿತಿ ನೀಡುವ ಸರಣಿ ಆಗಿದ್ದು ಜನರು ಇದರ ಉಪಯೋಗ ಪಡೆದುಕೊಳ್ಳಬಹುದು. ಈ ಕಾರ್ಯಕ್ರಮವನ್ನು ಎಫ್ ಎಂ 103.5 ಹಾಗೂ ಎಂವಿ 675 ಕೆಹೆಚ್ಜ್ ನಲ್ಲಿ ಕೇಳುವುದರೊಟ್ಟಿಗೆ ಜಗತ್ತಿನಾದ್ಯಂತ Akashavani Bhadravathi live streaming ಮತ್ತು prasarabharati news on air app ನಲ್ಲಿ ಪ್ರಸಾರ ಸಮಯದಲ್ಲಿ ಕೇಳಬಹುದು ಎಂದು ಭದ್ರಾವತಿ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಎಸ್.ಆರ್.ಭಟ್ ತಿಳಿಸಿದ್ದಾರೆ.

## ಏ.14 ರಂದು ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ

**ಹಾಸನ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಏ.14 ರಂದು ಬೆ.11 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿಯನ್ನು ಆಯೋಜಿಸಲಾಗಿದೆ. ಅಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ, ನಂತರ ಹಾಸನಾಂಬ ಕಲಾಕ್ಷೇತ್ರದವರೆಗೆ ಮೆರವಣಿಗೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ. ದೇವೇಗೌಡ ಅವರು ಗೌರವಾನ್ವಿತ ಉಪಸ್ಥಿತಿ ವಹಿಸಲಿದ್ದಾರೆ. ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ ಘನ ಉಪಸ್ಥಿತಿ ವಹಿಸಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ. ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್ ರೇವಣ್ಣ ಹಾಗೂ ನಗರಸಭೆ ಅಧ್ಯಕ್ಷರಾದ ಚಂದ್ರೇಗೌಡ ಎಂ. ಭಾಗವಹಿಸಲಿದ್ದಾರೆ. ಡಾ. ಬಿ.ಆರ್ ಅಂಬೇಡ್ಕರ್ ವಾದಿ ಹಾಗೂ ಚಿಂತಕರು, ಬೆಂಗಳೂರು ಮೆಡಿಕಲ್ ಕಾಲೇಜಿನ ನೇತ್ರಶಾಸ್ತ್ರ ವಿಭಾಗದ ನಿವೃತ್ತ ಪ್ರೊಫೆಸರ್ ಮತ್ತು ಮುಖ್ಯಸ್ಥರಾದ ಡಾ॥ ಹೆಚ್.ಆರ್. ಸುರೇಂದ್ರ ಅವರು ಕಾರ್ಯಕ್ರಮ ಕುರಿತು ಮುಖ್ಯ ಭಾಷಣ ಮಾಡಲಿದ್ದಾರೆ.

# ಹಾಲಿನ ದರ ಹೆಚ್ಚಳದಿಂದ ಹಾಸನ ಹಾಲು ಒಕ್ಕೂಟಕ್ಕೆ ಪ್ರತಿದಿನ 36 ಲಕ್ಷ ರೂ. ನಷ್ಟ"

**ಹಾಸನ:** ಸರ್ಕಾರದ ಆದೇಶದಂತೆ ಹಾಲಿನ ದರ ನಾಲ್ಕು ರೂ. ಹೆಚ್ಚಳ ಮಾಡುವುದರಿಂದ ಹಾಸನ ಹಾಲು ಒಕ್ಕೂಟಕ್ಕೆ ಪ್ರತಿದಿನ 36 ಲಕ್ಷ ನಷ್ಟ ಉಂಟಾಗಲಿದೆ ಎಂದು ಹಾಸನ ಹಾಲು ಒಕ್ಕೂಟದ ಅಧ್ಯಕ್ಷ ಎಚ್.ಡಿ .ರೇವಣ್ಣ ತಿಳಿಸಿದರು.

ನಗರದ ಹಾಸನ ಹಾಲು ಒಕ್ಕೂಟದ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಹಾಲಿನ ದರವನ್ನು ನಾಲ್ಕು ರೂ. ಹೆಚ್ಚಳ ಮಾಡಿದೆ. ಈಗಾಗಲೇ ನಮ್ಮ ಒಕ್ಕೂಟಕ್ಕೆ ಹಾಲಿನ ದರೆ ಹೆಚ್ಚಳ ಮಾಡುವಂತೆ ಪತ್ರವನ್ನು ಸಹ ಕಳುಹಿಸಿದ್ದಾರೆ. ಸಿಎಂ ಆದೇಶವನ್ನು ನಾವು ಸಹ ಪಾಲಿಸಬೇಕಾಗುತ್ತದೆ ಎಂದರು.

ಹಾಲಿನ ದರ ಹೆಚ್ಚಳ ಮಾಡುವುದರಿಂದ ಹಾಸನ ಹಾಲು ಒಕ್ಕೂಟಕ್ಕೆ ಆಗುವಂತಹ ನಷ್ಟದ ಪರಿಸ್ಥಿತಿಯನ್ನು ಮುಖ್ಯಮಂತ್ರಿ, ಸರ್ಕಾರದ ಕಾರ್ಯದರ್ಶಿ, ಸಂಬಂಧಪಟ್ಟ ಸಚಿವರು ಹಾಗೂ ಕೆಎಂಎಫ್‌ಗೆ 2 ಬಾರಿ ಪತ್ರ ಬರೆದಿದ್ದೇನೆ ಅದರೂ ಸಹ ದರ ಏರಿಕೆಯನ್ನು ಮಾಡಲಾಗಿ ದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಾಸನ ಹಾಲು ಒಕ್ಕೂಟಕ್ಕೆ ಪ್ರತಿದಿನ 12,58,000 ಲೀಟರ್ ಹಾಲು ಬರುತ್ತಿದೆ ಬೇಸಿಗೆ ಕಳೆದರೆ ಮತ್ತೆ.2.50 ಲಕ್ಷ ಲೀಟರ್ ಹಾಲು ಹೆಚ್ಚಾಗುತ್ತದೆ. ಸದ್ಯದ ಪರಿಸ್ಥಿತಿಯಲ್ಲಿ ಚಿಕ್ಕಮಗಳೂರು, ಹಾಸನ ಕೊಡಗು ಜಿಲ್ಲೆಯಲ್ಲಿ ನಿತ್ಯ 1,98,000 ಲೀಟರ್ ಹಾಲನ್ನು ಮಾರಾಟ ಮಾಡುತ್ತಿದ್ದೇವೆ ಎಂದರು.

ಪ್ರತಿದಿನ 1,20,000 ಲೀಟರ್ ಮೊಸರು ಸೇರಿದಂತೆ 3,18,000 ಲೀಟರ್ ಹಾಲು ಮತ್ತು ಮೊಸರನ್ನು ಒಕ್ಕೂಟದಿಂದ ಮಾರಾಟ ಮಾಡಲಾಗುತ್ತಿದ್ದು 9,40,000



ಲೀಟರ್ ಹಾಲು ಉಳಿಕೆಯಾಗುತ್ತಿದೆ. ಸರ್ಕಾರ 4 ರೂ. ಏರಿಸಿದರೆ ಒಂದು ತಿಂಗಳಿಗೆ 9 ಕೋಟಿ ನಷ್ಟ ವಾಗುತ್ತಿದೆ ಎಂದರು.

ಒಕ್ಕೂಟದಲ್ಲಿ ಸದ್ಯ 5 ಕೋಟಿ ಲಾಭಾಂಶವಿದ್ದು ಆ ಹಣ ಖಾಲಿಯಾಗುವವರೆಗೂ ಸರ್ಕಾರದ ಆದೇಶವನ್ನು ಪಾಲಿಸಲಾಗುವುದು ನಂತರ ಸಾಮಾನ್ಯ ಸಭೆ ಕರೆದು ರೈತರ ಹಾಗೂ ಸದಸ್ಯರ ಅಭಿಪ್ರಾಯವನ್ನು ಸಂಗ್ರಹಿಸಿ ಸರ್ಕಾರಕ್ಕೆ ಮತ್ತೊಮ್ಮೆ ವಸ್ತು ಸ್ಥಿತಿಯನ್ನು ತಿಳಿಸಲಾಗುವುದು ಎಂದರು.

ಒಂದು ಸಂಸ್ಥೆ ಕಟ್ಟುವುದು ಅಷ್ಟು ಸುಲಭವಲ್ಲ ಕಟ್ಟಿರುವುದನ್ನು ಉಳಿಸಬೇಕಾಗುತ್ತದೆ. ಮುಖ್ಯಮಂತ್ರಿಗಳ ಮಾತಿಗೆ ಗೌರವ ಕೊಟ್ಟು ನಾಲ್ಕು ರೂ. ಹೆಚ್ಚಳ ಮಾಡಿದ್ದೇವೆ. ಮುಂದೆ ಹಾಸನ ಹಾಲು ಒಕ್ಕೂಟ ನಷ್ಟ ಉಂಟಾದರೆ ಕೆಎಂಎಫ್ ಹಾಗೂ ಸರ್ಕಾರವೇ ಭರಿಸಬೇಕಾಗುತ್ತದೆ. ತಿಂಗಳಿಗೆ 9 ಕೋಟಿ ನಷ್ಟ ಮಾಡಿಕೊಂಡು ಹಾಲು ಮಾರಾಟ ಮಾಡಲು ಆಗುತ್ತದೆಯೇ ಎಂದು ಪ್ರಶ್ನಿಸಿದರು.

ಇತ್ತೀಚೆಗೆ ಮುಖ್ಯಮಂತ್ರಿಗಳು ಕರೆದಂತಹ ಸಭೆಯಲ್ಲಿ ಹಾಲಿನ ದರ 3 ರೂ. ಹೆಚ್ಚಳ ಹಾಗೂ 50 ಪೈಸ ಒಕ್ಕೂಟಕ್ಕೆ ನೀಡುವಂತೆ ಮಾತುಕತೆಯಾಗಿತ್ತು ಆದರೆ ಕೆಲವರು ನಾಲ್ಕು ರೂಪಾಯಿ ಹೆಚ್ಚಳ ಮಾಡುವಂತೆ ಒತ್ತಡ ಬರಿದ್ದಾರೆ ಎಂದು ಆರೋಪಿಸಿದರು.

ನಾನು ಒಕ್ಕೂಟದ ಅಧ್ಯಕ್ಷನಾಗಿದ್ದ ಸಂದರ್ಭದಲ್ಲಿ ಖಾಸಗಿ ಹಾಲು ಉತ್ಪಾದಕರಿಗೆ ಕಡಿವಾಣ ಹಾಕಿದ್ದೆ ಆದರೆ ಸರ್ಕಾರದ ಇಂತಹ ನಿರ್ಧಾರಗಳಿಂದ ಕೆಎಂಎಫ್ಗೆ ಮುಂದಿನ ದಿನಗಳಲ್ಲಿ ತೊಂದರೆ ಆಗಲಿದೆ. ಮುಂದಿನ 10 ತಿಂಗಳಲ್ಲಿ 90 ಕೋಟಿ ಹಾಸನ ಹಾಲು ಒಕ್ಕೂಟಕ್ಕೆ ನಷ್ಟ ಉಂಟಾಗಲಿದ್ದು ಸಹಕಾರ ಸಚಿವ ರಾಜಣ್ಣ, ಮುಖ್ಯಮಂತ್ರಿ ಸೇರಿದಂತೆ ಎಲ್ಲರಿಗೂ ವಾಸ್ತುಸ್ಥಿತಿಯನ್ನು ವಿವರಿಸಲಾಗುವುದು ಎಂದರು.

ನವಂಬರ್ ತಿಂಗಳವರೆಗೂ ಸರ್ಕಾರಿದಿಂದ ಪ್ರೋತ್ಸಾಹ ಧನ ಬಂದಿದ್ದು, 2024 ಡಿಸೆಂಬರ್ ನಿಂದ ಮಾರ್ಚ್ 2025 ವರೆಗೂ 43 ಕೋಟಿ ಬಾಕಿ ಹಣ ಬರಬೇಕಾಗಿದೆ ಎಂದು ರೇವಣ್ಣ ವಿವರಿಸಿದರು.

## ಶುಲ್ಕ ಮರುಪಾವತಿಗೆ ಅವಧಿ ವಿಸ್ತರಣೆ

**ಹಾಸನ :** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ ಹಾಗೂ ಮಾನ್ಯ ಹೈ ಕೋರ್ಟ್ ಮಧ್ಯಂತರ ಆದೇಶದಂತೆ ಎಲ್ಲಾ ಕೋರ್ಸುಗಳಿಗೆ "ಶುಲ್ಕ ಮರುಪಾವತಿ" ಕಾರ್ಯಕ್ರಮಕ್ಕೆ ಮಾತ್ರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮೇ.31 ಆಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in, ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ https://bcwd.karnataka.gov.in/, ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ ಮತ್ತು ಇ-ಮೇಲ್ 8050770005 bcwdhelpline@gmail.com, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ ಮತ್ತು ಇ-ಮೇಲ್ postmetrichelp@karnataka.gov.in 1902, ಆಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಹೃದಯಾಘಾತದಿಂದ ಚಾಲಕ ಸಾವು, ನಿಯಂತ್ರಣ ಕಳೆದುಕೊಂಡು ಮಹಿಳೆ ಮೇಲೆ ಹರಿದ ಬಸ್

**ಮೈಸೂರು:** ಚಲಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಚಾಲಕನಿಗೆ ಹೃದಯಾಘಾತವಾಗಿ ಪಾದಚಾರಿ ಮಹಿಳೆಗೆ ಬಸ್ ಡಿಕ್ಕಿಯಾಗಿದ್ದು, ಈ ವೇಳೆ ಪಾದಚಾರಿ ಮಹಿಳೆ ಮತ್ತು ಬಸ್ ಚಾಲಕ ಇಬ್ಬರೂ ಸಾವನ್ನಪ್ಪಿರುವ ಘಟನೆ ಹೆಚ್.ಡಿ.ಕೋಟೆ ತಾಲೂಕಿನ ದಮ್ಮನಕಟ್ಟೆ ಬಳಿ ನಡೆದಿದೆ.

ಹೊರಗುತ್ತಿಗೆ ಆಧಾರದಲ್ಲಿ ಚಾಲಕನಾಗಿ ಸೇವೆ ಸಲ್ಲಿಸುತ್ತಿದ್ದ ಮೈಸೂರು ಮೂಲದ ಚಾಲಕ ಸುನೀಲ್ ಕುಮಾರ್, ಹೆಚ್.ಡಿ.ಕೋಟೆ ತಾಲೂಕಿನ ದಮ್ಮನಕಟ್ಟೆ ಗ್ರಾಮದ ಲಕ್ಷ್ಮಮ್ಮ ಸ್ಥಳದಲ್ಲೇ ಮೃತಪಟ್ಟವರಾಗಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ಕೇರಳ ರಾಜ್ಯದ ಮಾನಂದವಾಡಿಯಿಂದ ಹೆಚ್.ಡಿ.ಕೋಟೆಗೆ ಬರುತ್ತಿತ್ತು. ಹೆಚ್.ಡಿ.ಕೋಟೆ ತಾಲೂಕಿನ ದಮ್ಮನಕಟ್ಟೆ ಬಳಿ ಬರುತ್ತಿದ್ದಂತೆ ಚಾಲಕನಿಗೆ ಹೃದಯಾಘಾತವಾಗಿದ್ದು ಬಸ್ ಸ್ಟೇರಿಂಗ್ ಮೇಲೆ ಚಾಲಕ ಪ್ರಜ್ಞೆ ತಪ್ಪಿ ಮಲಗಿದ್ದು



ಈ ವೇಳೆ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಜಮೀನಿಗೆ ಬಸ್ ನುಗ್ಗಿದೆ.

ಈ ಸಮಯದಲ್ಲಿ ಪಾದಾಚಾರಿ ಮಹಿಳೆ ಲಕ್ಷ್ಮಮ್ಮಗೆ ಡಿಕ್ಕಿಯಾಗಿ ಮಹಿಳೆ ಸಾವನ್ನಪ್ಪಿದ್ದಾರೆ. ಆದೃಷ್ಟವಶಾತ್ ಪ್ರಯಾಣಿಕರು ಅಪಾಯದಿಂದ ಪಾರಾಗಿದ್ದಾರೆ. ಈ ಕುರಿತು ಹೆಚ್.ಡಿ.ಕೋಟೆ ತಾಲೂಕಿನ ಅಂತರಸಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಏ.5 ರಂದು ಡಾ.ಬಾಬು ಜಗಜೀವನ್ ರಾಮ್ ಜನ್ಮದಿನಾಚರಣೆ

**ಹಾಸನ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಏ.5 ರಂದು ಬೆ.11 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಡಾ.ಬಾಬು ಜಗಜೀವನ್ ರಾಮ್ ರವರ 118ನೇ ಜನ್ಮದಿನಾಚರಣೆಯನ್ನು ಆಯೋಜಿಸಲಾಗಿದೆ. ಅಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದ ವರೆಗೆ ಮೆರವಣಿಗೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ. ದೇವೇಗೌಡ ಅವರು ಗೌರವಾನ್ವಿತ ಉಪಸ್ಥಿತಿ ವಹಿಸಲಿದ್ದಾರೆ. ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ ಘನ ಉಪಸ್ಥಿತಿ ವಹಿಸಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ. ರೇವಣ್ಣ, ಡಾ.ಸಿ.ಎನ್. ಬಾಲಕೃಷ್ಣ, ಎ.ಮಂಜು, ಹೆಚ್.ಕೆ. ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್ ರೇವಣ್ಣ ಹಾಗೂ ನಗರಸಭೆ ಅಧ್ಯಕ್ಷರಾದ ಚಂದ್ರೇಗೌಡ ಎಂ. ಭಾಗವಹಿಸಲಿದ್ದಾರೆ. ಮೈಸೂರಿನ ವಿಚಾರವಾದಿಗಳು ಮತ್ತು ಹಿರಿಯ ಚರ್ಮ ರೋಗ ತಜ್ಞರಾದ ಡಾ॥ ಕುಮಾರ್ ಭೂತಯ್ಯ ಅವರು ಕಾರ್ಯಕ್ರಮ ಕುರಿತು ಮುಖ್ಯ ಭಾಷಣ ಮಾಡಲಿದ್ದಾರೆ.

## ಜಗಳೂರು ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಬೆಂಕಿ: ಅಡಿಕೆ-ಬಾಳೆ ಗಿಡಗಳು ಆಹುತಿ

**ಜಗಳೂರು:** ಪಟ್ಟಣದ ಕೊಟ್ಟೂರು ರಸ್ತೆಯಲ್ಲಿರುವ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಬೆಂಕಿ ಹತ್ತಿದ ಪರಿಣಾಮ 300 ಅಡಕೆ ಮತ್ತು 300 ಬಾಳೆ ಗಿಡಗಳು ಬೆಂಕಿಯ ಕೆನ್ನಾಲಿಗೆಗೆ ಆಹುತಿಯಾದ ಘಟನೆ ನಡೆದಿದೆ.

ರಸ್ತೆ ಬದಿ ಕಸ, ಹಸಿ ಕಸ, ಒಣ ಕಸ ವಿಂಗಡಿಸಬೇಕಾದ ಕಸ ಸಂಸ್ಕರಣ ಮತ್ತು ತ್ಯಾಜ್ಯ ವಿಲೇವಾರಿ ಜಾಗದಲ್ಲಿ ಬ್ಯಾಗಡಿಗಳಿಗೆ ಹತ್ತಿದ ಬೆಂಕಿ ಹಚ್ಚ ಹಸಿರಿನಿಂದ ಕಂಗೊಳಿಸುತ್ತಿದ್ದ ಅಡಕೆ, ಬಾಳೆ ಗಿಡಗಳನ್ನು ಆಪೋಷನ ಪಡೆದಿದೆ. ಖ್ಯಾತ ನಾಟಕ ಕಂಪನಿಯಾದ ಚಿಂದೋಡಿ ಲೀಲಾ


ಕಂಪನಿಯ ಮಾಲೀಕರ ಚಿಂದೋಡಿ ಶಂಭುಲಿಂಗಪ್ಪ ಅವರ ಅಳಿಯ ಜೆ.ಎಸ್. ಪ್ರಶಾಂತ್ ಕುಮಾರ್ ಅವರದಾಗಿದ್ದು, ಭಾನುವಾರ ಸಂಜೆ 4 ಗಂಟೆಗೆ ತೋಟಕ್ಕೆ ಬೆಂಕಿ ಹತ್ತಿದ್ದು ಎರಡು ವರ್ಷದ ಗಿಡಗಳು ಸುಟ್ಟು ಕರಕಲಾಗಿದೆ.

ಕಾಂಪೌಂಡ್ ಇದ್ದರೂ ಸಹ ಬೆಂಕಿಯ ಕಿಡಿ ಅದರಾಚೆಗಿರುವ ಒಳ ಹುಲ್ಲಿನ ಕಿರಿದಾದ ಬೆಟ್ಟಕ್ಕೆ ತಾಗಿ ನಂತರ ಪ್ರಶಾಂತ್ಕುಮಾರ್ ತೋಟಕ್ಕೆ ನುಗ್ಗಿದೆ. ಯುಗಾದಿ ಸಂಭ್ರಮದಲ್ಲಿದ್ದರಿಂದ ರೈತರು ಬೆಂಕಿ ವ್ಯಾಪಿಸುತ್ತಿರುವುದನ್ನು ಗಮನಿಸಿಲ್ಲ. ತಕ್ಷಣ ಬೆಂಕಿಯ ಜ್ವಾಲೆಯನ್ನು ವೀಕ್ಷಿಸಿದ ಪಕ್ಕದ

ಜಮೀನಿನ ರೈತ, ಪ್ರಶಾಂತ್ ಕುಮಾರ್ ಗಮನಕ್ಕೆ ತಂದಿದ್ದು, ಅವರು ಅಗ್ನಿ ಶಾಮಕ ಠಾಣಾ ಸಿಬ್ಬಂದಿಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಅಗ್ನಿ ಶಾಮಕ ತಂಡ ಸ್ಥಳಕ್ಕೆ ಬರುವಷ್ಟರಲ್ಲಿ ಅಡಕೆ, ಬಾಳೆ ಗಿಡಗಳು ಸುಟ್ಟಿವೆ. ಅಷ್ಟೇ ಅಲ್ಲದೇ ಲ್ಯಾಟರಲ್ ಪೈಪ್ಗಳು, ಸ್ಪಿಂಕ್ಲರ್ ಪೈಪ್ಗಳು ಸಂಪೂರ್ಣ ಸುಟ್ಟು ಹೋಗಿವೆ.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಲೋಕ್ಯಾನಾಯ್ಕ ಸ್ಥಳಕ್ಕೆ ಭೇಟಿ ನೀಡಿ ಬೆಂಕಿ ತಾಗಲು ಕಾರಣವೇನು ಎಂಬುದರ ಬಗ್ಗೆ ಪರಿಶೀಲಿಸಿದಾಗ ತ್ಯಾಜ್ಯ ನಿರ್ವಹಣ ಘಟಕದಲ್ಲಿ ದಟ್ಟವಾದ ಬೆಂಕಿಯ ಜ್ವಾಲೆ ಉರಿಯುತ್ತಿರುವುದು ಕಂಡು ಬಂದು, ಘನತ್ಯಾಜ್ಯ ಬೆಂಕಿಯಿಂದಲೇ ಈ ಅವಘಡ ಸಂಭವಿಸಿದೆ ಎಂಬುದನ್ನು ಶಾಸಕ ದೇವೇಂದ್ರಪ್ಪ ಅವರಿಗೆ ಮಾಹಿತಿ ನೀಡಿದರು.

## ಡಾ.ಬಾಬು ಜಗಜೀವನ್ ರಾಮ್ ರವರ 118 ನೇ ಜನ್ಮ ದಿನಾಚರಣೆ



**ಚಿಕ್ಕಮಗಳೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 5 ರಂದು ಬೆಳಿಗ್ಗೆ 10.30ಕ್ಕೆ ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ರವರ 118ನೇ ಜನ್ಮ ದಿನಾಚರಣೆಯನ್ನು ನಗರದ ಕುವೆಂಪು ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಇಂಧನ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ

ನಿಗಮದ ಅಧ್ಯಕ್ಷರು ಹಾಗೂ ಶೃಂಗೇರಿ ವಿಧಾನಸಭಾ ಕ್ಷೇತ್ರದ ಶಾಸಕರು ಆದ ಟಿ.ಡಿ. ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಧಾನಸಭಾ ಕ್ಷೇತ್ರದ ಶಾಸಕರು ಆದ ಟಿ.ಡಿ. ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ಪಾಲ್ಗೊಳ್ಳಲಿದ್ದಾರೆ.

ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭಾ ಸದಸ್ಯ ಜೈರಾಮ್ ರಮೇಶ್, ಹಾಸನ ಲೋಕಸಭಾ ಸದಸ್ಯ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ

ಜಿ. ಹೆಚ್. ಶ್ರೀನಿವಾಸ್, ಕೆ.ಎಸ್. ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ಎಲ್.ಭೋಜೇಗೌಡ, ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷ ಡಾ.ಅಂಶುಮಂತ್, ಕ. ರಾ. ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷ ಬಿ.ಹೆಚ್. ಹರೀಶ್, ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ಬೆಲೆ ಏರಿಕೆ ವಿರುದ್ಧ ಹೋರಾಟ: ಏಕಾಂಗಿ ಹೋರಾಟ ಸರಿಯಲ್ಲ ಎಂದ JDS, ಮೈತ್ರಿ ಪಕ್ಷಗಳ ನಡುವೆ ಶುರುವಾಯ್ತು ಮುನಿಸು..!

**ಬೆಂಗಳೂರು:** ಬೆಲೆ ಏರಿಕೆ ಸೇರಿದಂತೆ ಹಲವು ಕಾರಣಗಳಿಗೆ ರಾಜ್ಯ ಸರಕಾರದ ವಿರುದ್ಧ ನಡೆಯುತ್ತಿರುವ ಪ್ರತಿಭಟನೆ ವಿಚಾರವಾಗಿ ಬಿಜೆಪಿ ಹಾಗೂ ಜೆಡಿಎಸ್ ನಡುವೆ ಅಸಮಾಧಾನ ಶುರುವಾಗಿದೆ.

ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ಬಿಜೆಪಿ ಪ್ರತಿಭಟನೆ ನಡೆಸಿದೆ. ಆದರೆ, ಈ ಪ್ರತಿಭಟನೆಗೆ ನಮ್ಮನ್ನು ಆಹ್ವಾನಿಸಿಯೇ ಇಲ್ಲ ಎಂದು ಜೆಡಿಎಸ್ ದೂರಿದೆ.

ಜೆಡಿಎಸ್ ಶಾಸಕಾಂಗ ನಾಯಕ ಸುರೇಶ್ ಬಾಬು ಅವರು ಪ್ರತಿಕ್ರಿಯಿಸಿ ಬಿಜೆಪಿ ಅಹೋರಾತ್ರಿ ಧರಣಿ ಮಾಡುತ್ತಿದೆ. ಆದರೆ ನಮಗೆ ಆಹ್ವಾನ ನೀಡಿಲ್ಲ. ಜೆಡಿಎಸ್‌ಗೆ ಮೇಲುಗೈ ಆಗುತ್ತದೆ ಎಂದು ಬಿಜೆಪಿ ನಮ್ಮನ್ನ ಕರೆದಿಲ್ಲ. ಮುಡಾ ಪಾದಯಾತ್ರೆಯಲ್ಲಿ ಹೀಗೆಯೇ ಆಯಿತು. ಈಗಲೂ ಹೀಗೆ ಆಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ನಾಯಕರಿಗೆ ಮನವಿ ಮಾಡುತ್ತಿದ್ದೇನೆ. ನಾವು ಒಟ್ಟಾಗಿ ಹೋರಾಟ ಮಾಡಬೇಕು. ರಾಜ್ಯದಲ್ಲಿ ಸಮನ್ವಯ ಸಾಧಿಸಲು ಒಂದು ಸಮಿತಿ ರಚಿಸಿಬೇಕು. ನಾವು ಒಟ್ಟಾಗಿ ರಾಜ್ಯ ಸರ್ಕಾರದ ವಿರುದ್ಧ ಹೋರಾಡಿದರೆ, ಬಲ ಹೆಚ್ಚಾಗುತ್ತದೆ. ಹೆಚ್ಚಿನ ಜನರನ್ನು ತಲುಪಬಹುದು ಎಂದು ಹೇಳಿದರು.

ಇಲ್ಲಿ ಸಮನ್ವಯದ ಕೊರತೆಯಿದ್ದು, ಅದು ಕೇಂದ್ರ ನಾಯಕರಿಗೆ ತಿಳಿದಿಲ್ಲ. ಬಿಜೆಪಿ ಧರಣಿ ಘೋಷಿಸಿದ ನಂತರ, ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಅವರೂ ಕೂಡ ಬೆಲೆ ಏರಿಕೆಯ ವಿರುದ್ಧ ಹೋರಾಡುವುದಾಗಿ ಹೇಳಿದ್ದರು. ಆದರೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಮ್ಮ ಹೋರಾಟ ಪ್ರತ್ಯೇಕವಾಗಿ ನಡೆಯಲಿದೆ ಎಂದು ಹೇಳಿದರು. ಇದು ಒಳ್ಳೆಯದಲ್ಲ.

ಎರಡೂ ಪಕ್ಷಗಳ ನಾಯಕರು ತಮ್ಮ ನಡುವಿನ ಸಮನ್ವಯದ ಬಗ್ಗೆ ಚರ್ಚಿಸಬೇಕು" ಎಂದು ತಿಳಿಸಿದರು.

ಏತನ್ಮಧ್ಯೆ ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಅವರು ಕೂಡ ಸಮನ್ವಯ ಸಮಿತಿ ರಚಿಸುವ ಬಗ್ಗೆ ಹೇಳಿಕೆ ನೀಡಿದ್ದಾರೆ.

ಏತನ್ಮಧ್ಯೆ, ಪ್ರತಿಕ್ರಿಯೆ ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು, ರಾಜ್ಯ ಸರ್ಕಾರ ಬೆಲೆ ಏರಿಕೆ ಮಾಡಿದ್ರೆ ತಕ್ಷಣವೇ ಸ್ಪಂದಿಸಬೇಕಾದದ್ದು ವಿಪಕ್ಷಗಳ ಕರ್ತವ್ಯ. ನಾನು ನಿಖಿಲ್ ಕುಮಾರಸ್ವಾಮಿ ಹೇಳಿಕೆ ಸಹ ಗಮನಿಸಿದ್ದೇನೆ. ನಾವು ಸಹ ರಾಜ್ಯ ಸರ್ಕಾರದ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ಮಾಡುವುದಾಗಿ ಹೇಳಿದ್ದಾರೆ.

ಇತ್ತೀಚೆಗೆ ಗ್ರೇಟರ್ ಬೆಂಗಳೂರು ವಿಚಾರದಲ್ಲಿ ಜೆಡಿಎಸ್ ಪ್ರತ್ಯೇಕ ಹೋರಾಟ ಮಾಡಿದ್ದರು. ಸಣ್ಣಪುಟ್ಟ ಗೊಂದಲ ಇದ್ದರೆ ಮಾತಾಡಿ ಬಗೆಹರಿಸಿಕೊಳ್ಳುತ್ತೇವೆ ಎಂದರು.

ಇದೇ ವೇಳೆ ಮೈತ್ರಿ ಗೊಂದಲ ಬಗೆಹರಿಸಲು ಸಮನ್ವಯ ಸಮಿತಿ ಮಾಡೋದು ಒಳ್ಳೆಯದೆ. ನಾವು ಕೂಡ ಚರ್ಚೆ ಮಾಡುತ್ತೇವೆ ಎಂದು ತಿಳಿಸಿದರು.

ಮೈತ್ರಿ ಗೊಂದಲ ವಿಚಾರವಾಗಿ ವಿಪಕ್ಷ ನಾಯಕ ಆರ್ ಅಶೋಕ್ ಮಾತನಾಡಿ, ನಮ್ಮ ಹೋರಾಟ ನಾವು ಮಾಡೋದು. ಅವರ ಹೋರಾಟ ಅವರು ಮಾಡ್ತಾರೆ. ಆದ್ರೆ ವಿಧಾನಸಭೆಯಲ್ಲಿ, ಚುನಾವಣೆ ವೇಳೆ ಹೊಂದಾಣಿಕೆ ಹೋರಾಟ ನಡೆಯಲಿದೆ. ನಮ್ಮ ನಡುವೆ ಹೀಗೆಯೇ ಮಾತುಕತೆ ನಡೆದಿರೋದು ಎಂದು ಸ್ಪಷ್ಟಪಡಿಸಿದರು.

# ಯುಗಾದಿ ಹೊಸ ತೊಡಕು ದಿನವೇ ಹೊಸ ಹೊಸ ದರ ವಿಧಿಸಿ ದರ ಬೀಜಾಸುರ ಸರ್ಕಾರ ವಿಜೃಂಭಿಸಿದೆ

**ಬೆಂಗಳೂರು:** ರಾಜ್ಯದಲ್ಲಿ 'ದರಬೀಜಾಸುರ' ಸರ್ಕಾರ ಜನರ ರಕ್ತ ಹೀರುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಡೀಸೆಲ್ ದರ ಲೀಟರಿಗೆ ರೂ.2 ಏರಿಕೆಯಾಗಿದೆ. ದಿನಕ್ಕೊಂದು ಸುಳ್ಳು, ತಿಂಗಳಿಗೊಂದು ದರ ಏರಿಕೆಯಾಗುತ್ತಿದೆ. ಕರ್ನಾಟಕ ಈಸ್ಟ್ ಇಂಡಿಯಾ ಕಾಂಗ್ರೆಸ್ ಕಂಪನಿ ಸರಕಾರದ ಆಡಳಿತದ ವೈಖರಿ ಇದು ಎಂದು ಕಿಡಿಕಾರಿದ್ದಾರೆ.

ಇಂದಿನಿಂದ ಕಾಂಗ್ರೆಸ್ ಕಂಪನಿ ಸರಕಾರ ಕಸದ ಮೇಲೆಯೂ ಸೆಸ್ ವಿಧಿಸುತ್ತಿದೆ. ಮಹಮ್ಮದ್

ಘಜ್ನಿ, ಮಹಮ್ಮದ್ ಘೋರಿ ಕೂಡ ನಾಚುವಂತೆ ಕನ್ನಡಿಗರ ಮೇಲೆ ದರ ಏರಿಕೆ ದಂಡಯಾತ್ರೆ ನಡೆಸುತ್ತಿದೆ. ದುರಾಡಳಿತದಿಂದ ಸಮೃದ್ಧ ಕರ್ನಾಟಕವನ್ನು ಬರ್ಬಾದ್ ಮಾಡಿರುವ ಕಾಂಗ್ರೆಸ್ ಕಂಪನಿ ಸರಕಾರ ದರಬೀಜಾಸುರ ರೂಪ ತಳೆದು ಜನರ ರಕ್ತ ಹೀರುತ್ತಿದೆ.

ನೀರು, ಮೆಟ್ರೋ ರೈಲು, ಏಖಖಖಿಲ ಬಸ್ ಟಿಕೆಟ್, ಹಾಲು (3 ಸಲ ದರ ಏರಿಕೆ), ಮೊಸರು, ವಿದ್ಯುತ್, ಮುದ್ರಾಂಕ, ಮಾರ್ಗದರ್ಶಿ ಮೌಲ್ಯ, ಅಬ್ಕಾರಿ ಸುಂಕ, ಸರ್ಕಾರಿ ಆಸ್ಪತ್ರೆಗಳಲ್ಲಿ ಹೊರ ರೋಗಗಳ ಶುಲ್ಕ, ಶವದ

ಮರಣೋತ್ತರ ಪರೀಕ್ಷೆ ಶುಲ್ಕ, ವೈದ್ಯಕೀಯ ಪ್ರಮಾಣ ಪತ್ರದ ದರ, ಲ್ಯಾಬ್ ನಲ್ಲಿ ಪರೀಕ್ಷೆ ಶುಲ್ಕ, ವೃತ್ತಿಪರ ತೆರಿಗೆ, ಬಿತ್ತನೆ ಬೀಜಗಳ ದರವನ್ನು ಸರ್ಕಾರ ಏರಿಕೆ ಮಾಡಿದೆ. ಇಷ್ಟು ಸಾಲದೆಂಬಂತೆ ಜನರ ಮೇಲೆ ಇಂದಿನಿಂದ (ಏಪ್ರಿಲ್ 1ರಿಂದ) ಕಸದ ಸೆಸ್ ಹೇರುತ್ತಿದೆ ದರ ಬೀಜಾಸುರ ಸರಕಾರ.

ಕಸ ಹೆಸರಿನಲ್ಲಿ ಕೋಟಿ ಕೋಟಿ ಸುಲಿಗೆ ಮಾಡಲು ಹೊರಟಿದೆ ಎಂದು ಆರೋಪಿಸಿದ್ದಾರೆ.

ಕಳೆದ ಹತ್ತು ತಿಂಗಳಲ್ಲಿ ಡಿಸೇಲ್ ಪ್ರತಿ ಲೀಟರಿಗೆ ರೂ.5 ಏರಿಕೆ ಭಾಗ್ಯವನ್ನು ಸರ್ಕಾರ ಕೊಟ್ಟಿದೆ. ಯುಗಾದಿ ಹೊಸ ತೊಡಕು ದಿನವೇ ಹೊಸ ಹೊಸ ದರ ವಿಧಿಸಿ ದರ ಬೀಜಾಸುರ ಸರಕಾರ ವಿಜೃಂಭಿಸಿದೆ. ಬೆಳಗ್ಗೆ ನಿದ್ರೆಯಿಂದ ಜನರೆದ್ದರೆ ಸುಲಿಗೆ ಬರೆ ಹಾಕುತ್ತಿದೆ ಕರ್ನಾಟಕ ಈಸ್ಟ್ ಇಂಡಿಯಾ ಕಾಂಗ್ರೆಸ್ ಕಂಪನಿ. ಕೈ ಕಂಪನಿ ಸರಕಾರಕ್ಕೆ ಕಣ್ಣಿಲ್ಲ, ಕರುಣೆಯೂ ಇಲ್ಲ. ಕಿತ್ತು ತಿನ್ನುವ ವಿಕೃತಿಯನ್ನು ಹತ್ತಿಕ್ಕಲು ಜನರು ಬೀದಿಗಿಳಿದು ದಂಗೆ ಏಳದೇ ವಿಧಿ ಇಲ್ಲ ಎಂದು ಕಿಡಿಕಾರಿದ್ದಾರೆ.

## ಚುನಾವಣಾ ವೇಳಾ ಪಟ್ಟಿ

**ದಾವಣಗೆರೆ :** ಹೊಸದಾಗಿ ನೋಂದಣಿಯಾದ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿ. ದಾವಣಗೆರೆ ಇದರ ಪ್ರಥಮ ಆಡಳಿತ ಮಂಡಳಿಗೆ ಚುನಾವಣೆಯನ್ನು ಏಪ್ರಿಲ್ 19 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 12, ಪಿ.ಬಿ.ರಸ್ತೆ ದಾವಣಗೆರೆ ಇಲ್ಲಿ ಚುನಾವಣೆ ನಡೆಸಲಾಗುವುದು.

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ಹಾಗೂ ಸಂಘದ ಬೈಲಾ ಅಧ್ಯಾಯ ಸಂ:7 ಇದ್ದು, ಕ್ರ.ಸಂ–59 ರ ರೀತ್ಯಾ ಸಂಘದ ಒಟ್ಟು ಆಡಳಿತ ಮಂಡಳಿ ಸದಸ್ಯರ ಸಂಖ್ಯೆ–17 ಇದ್ದು, ಈ ಪೈಕಿ ಚುನಾವಣೆ ಮೂಲಕ ಚುನಾಯಿಸಬೇಕಾದ ನಿರ್ದೇಶಕರ ಸಂಖ್ಯೆ ಒಟ್ಟು–8 ಸ್ಥಾನಗಳಿಗೆ ಚುನಾವಣೆ ನಡೆಸಲಾಗುವುದು.

8 ಸ್ಥಾನಗಳ ಕ್ಷೇತ್ರ ವಿಂಗಡಣೆ ಹಾಗೂ ಮೀಸಲಾತಿ ವಿವರ: ಸಾಮಾನ್ಯ–2, ಪರಿಶಿಷ್ಟ ಜಾತಿ–1, ಪರಿಶಿಷ್ಟ ಪಂಗಡ–1, ಹಿಂದುಳಿದ ವರ್ಗ ಎ–2 ಹಾಗೂ ಮಹಿಳಾ ಮೀಸಲು–2 ಸ್ಥಾನಗಳಿಗೆ ಚುನಾವಣೆ ನಡೆಸಲಾಗುವುದು.

ಚುನಾವಣಾ ವೇಳಾಪಟ್ಟಿ: ಏ.4 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸ್ವೀಕರಿಸಲಾಗುವುದು. ಏ.11 ನಾಮಪತ್ರ ಸಲ್ಲಿಸಲು ಕೊನೆಯ ದಿನ. ಏ.12 ನಾಮಪತ್ರಗಳ ಪರಿಶೀಲನೆ ನಂತರ ಚುನಾವಣಾಧಿಕಾರಿಗಳಿಂದ ಕ್ರಮ ಬದ್ಧವಾಗಿ ನಾಮನಿರ್ದೇಶನಗೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟ. ಏ.13 ರಂದು ನಾಮಪತ್ರ ವಾಪಸ್ಸು ಪಡೆಯುವ ದಿನ. ನಂತರ ಸ್ಪರ್ಧೆಯಲ್ಲಿ ಉಳಿದ ಅಭ್ಯರ್ಥಿಗಳ ಪಟ್ಟಿ ಪ್ರಕಟ, ಹಾಗೂ ಚುನಾವಣಾಧಿಕಾರಿಗಳಿಂದ ಅಭ್ಯರ್ಥಿಗಳಿಗೆ ಚುನಾವಣಾ ಚಿಹ್ನೆಗಳನ್ನು ಹಂಚಿಕೆ ಮಾಡಲಾಗುವುದು. ಏ.14 ರಂದು ಸೂಚನಾ ಫಲಕದಲ್ಲಿ ಚಿಹ್ನೆಗಳ ಸಮೇತ ಮಾದರಿ ಮತ ಪತ್ರದ ಹಂಚಿಕೆ. ಏ.19 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಸಲಾಗುವುದು. ನಂತರ ಅದೇ ದಿನ ಮತ ಎಣಿಕೆ ಹಾಗೂ ಫಲಿತಾಂಶ ಪ್ರಕಟಿಸಲಾಗುವುದೆಂದು ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿ, ರಿಟರ್ನಿಂಗ್ ಅಧಿಕಾರಿ ಸತೀಶ್ ನಾಯ್ಕ.ಎಲ್ ತಿಳಿಸಿದ್ದಾರೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಆಹ್ವಾನ

**ದಾವಣಗೆರೆ :** ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ (ವಿ.ಆರ್.ಡಬ್ಲ್ಯೂ) ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವರ್ಷ ಒಳಗಿನ ವಯೋಮಾನದವರಾಗಿದ್ದು ಮಾಸಿಕ ರೂ.9,000/–ಗಳ ಗೌರವಧನ ಆಧಾರದ ಮೇಲೆ ಕೆಲಸ ಮಾಡಲು ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಹಾಗೂ ಕಂಪ್ಯೂಟರ್ ಜ್ಞಾನವುಳ್ಳರಾಗಿರಬೇಕು. ಅರ್ಜಿ ಸಲ್ಲಿಸಲು ಏಪ್ರಿಲ್ 21 ಕೊನೆಯ ದಿನವಾಗಿರುತ್ತದೆದಾವಣಗೆರೆ ತಾಲ್ಲೂಕು ಹಳೇಬಾತಿ, ಆಲೂರಟ್ಟಿ, ಚನ್ನಗಿರಿ ತಾಲ್ಲೂಕಿನ ಹಿರೇಕೋಗಲೂರು ಗ್ರಾಮ ಪಂಚಾಯಿತಿಯ ಹರಿಹರ ತಾಲ್ಲೂಕಿನ ಉಕ್ಕಡಗಾತ್ರಿ ವ್ಯಾಪ್ತಿಯಲ್ಲಿ ವಾಸವಿರುವ ವಿಕಲಚೇತನ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅರ್ಜಿ ಹಾಗೂ ಇತರೆ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳ ಕಛೇರಿ, ದೇವರಾಜ್ ಅರಸ್ ಬಡಾವಣೆ, 'ಬಿ' ಬ್ಲಾಕ್, ಶಿವಾಲಿ ಟಾಕೀಸ್ ಹತ್ತಿರ, ದಾವಣಗೆರೆ ದೂರವಾಣಿ:08192–263939 ಹಾಗೂ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ದಾವಣಗೆರೆ ಮೊ:9590829024 ಮತ್ತು ಚನ್ನಗಿರಿ ತಾಲ್ಲೂಕು ಮೊ:9945738141, ಹರಿಹರ

## ಇಂದು ಶ್ರೀ ಅಣಗೆರೆ ಭೂತಪ್ಪ ಶ್ರೀ ಚೌಡೇಶ್ವರಿ ದೇವಿಯ ನೂತನ ದೇವಸ್ಥಾನ ಉದ್ಘಾಟನೆ

**ದಾವಣಗೆರೆ:** ನಗರ ಶಾಂತಿನಗರ ರಿಂಗ್ ರಸ್ತೆಯ ಶ್ರೀ ಅಣಗೆರೆ ಭೂತಪ್ಪ ಶ್ರೀ ಚೌಡೇಶ್ವರಿ ದೇವಿಯ ನೂತನ ದೇವಸ್ಥಾನ ಉದ್ಘಾಟನೆ ಹಾಗೂ ಶಿಲಾಮೂರ್ತಿಯ ಪುನರ್ ಪ್ರಾಣ ಪ್ರತಿಷ್ಠಾಪನೆ ಹಾಗೂ ಧಾರ್ಮಿಕ ಸಮಾರಂಭ ಏ.4 ರಂದು ನಡೆಯಲಿದೆ.

ಕಾರ್ಯಕ್ರಮದಲ್ಲಿ ಆವರಗೊಳ್ಳ ಪುರವರ್ಗ ಹಿರೇಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸಲಿದ್ದಾರೆ. ಬೆಳಿಗ್ಗೆ 8 ಗಂಟೆಯಿಂದ 10:30ರವರೆಗೆ ವೆಗೆ ಸಲ್ಲುವ ಉದಯ ಲಗ್ನದ ಶುಭಮುಹೂರ್ತದಲ್ಲಿ ದೇವಾಲಯ ಪ್ರವೇಶ ಮತ್ತು ಶ್ರೀ ದೇವಿಯ ಶಿಲಾಮೂರ್ತಿಯನ್ನು ಪುನಃ ಪ್ರಾಣಪ್ರತಿಷ್ಠಾಪನೆ ಮಾಡಲಾಗುತ್ತದೆ. ದೇವಿಗೆ ರುದ್ರಾಭಿಷೇಕ, ವಿಶೇಷ ಅಲಂಕಾರ ಪೂಜಾ ವಿಧಿ ವಿಧಾನಗಳು ನಡೆಯುತ್ತವೆ. ನಂತರ ಬೆಳಿಗ್ಗೆ 9 ರಿಂದ ಶ್ರೀಗಳಿಂದ ಶ್ರೀದೇವಿ ಶಿಲಾಮೂರ್ತಿಗೆ ಪ್ರಾಣಪ್ರತಿಷ್ಠಾಪನೆ, ಆಶೀರ್ವಚನ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಶಾಸಕ ಡಾ. ಶಾಮನೂರು ಶಿವಶಂಕರಪ್ಪ, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಪಾಲಿಕೆ ಮಾಜಿ ಸದಸ್ಯೆ ಆಶಾ ಉಮೇಶ್, ಬಿಜೆಪಿ ಮುಖಂಡ ಶ್ರೀನಿವಾಸ ದಾಸಕರಿಯಪ್ಪ, ವಿಶಾಲಾಕ್ಷಮ್ಮ ರುದ್ರಪ್ಪ, ಎಸ್. ಎಸ್. ಜಿ. ಚಿದಾನಂದಪ್ಪ, ಈರಯ್ಯ, ಪಿ.ಜೆ. ಹೇಮರಾಜ್, ರಮೇಶ್ ಮತ್ತಿತರರು ಉಪಸ್ಥಿತರಿರುವರು. ಮಧ್ಯಾಹ್ನ 12–30 ರಿಂದ ಅನ್ನಸಂಪರ್ತಪಣೆ ನಡೆಯುವುದು.

# ಅಗತ್ಯ ವಸ್ತುಗಳ ಬೆಲೆ ಏರಿಕೆ: ಎಲ್ಲೆಡೆ ವಿರೋಧ, ಕೇಂದ್ರದ ನೀತಿಗಳೇ ಪ್ರಮುಖ ಕಾರಣ ಎಂದು ಸರ್ಕಾರ ಸಮರ್ಥನೆ

**ಬೆಂಗಳೂರು:** ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸರ್ಕಾರದ ವಿರುದ್ಧ ಅಹೋರಾತ್ರಿ ಧರಣಿ ನಡೆಸುವ ಮೂಲಕ ಪ್ರತಿಪಕ್ಷ ಬಿಜೆಪಿ ಜನಾಕ್ರೋಶದ ಕಹಳೆ ಮೊಳಗಿಸಿದ್ದು, ಈ ನಡುವಲ್ಲೇ ಬೆಲೆ ಏರಿಕೆ ನಿರ್ಧಾರವನ್ನು ರಾಜ್ಯ ಸರ್ಕಾರ ಸಮರ್ಥಿಸಿಕೊಂಡಿದೆ.

ಬೆಲೆ ಏರಿಕೆಗೆ ಕೇಂದ್ರದ ನೀತಿಗಳೇ ಕಾರಣ. ಕೇವಲ ಕರ್ನಾಟಕದಲ್ಲಷ್ಟೇ ಅಲ್ಲ, ದೇಶದೆಲ್ಲೆಡೆ ಇದೇ ರೀತಿಯ ಪರಿಸ್ಥಿತಿ ಇದೆ. ಒಕ್ಕೂಟ ರಚನೆಯಲ್ಲಿ, ರಾಜ್ಯ ಮತ್ತು ಕೇಂದ್ರವು ಉತ್ತಮ ಸಂಬಂಧವನ್ನು ಹೊಂದಿರಬೇಕು. ಅದು ಉತ್ತಮವಾಗಿಲ್ಲದಿದ್ದಾಗ ಬೆಲೆ ಏರಿಕೆ–ಯಾಗುತ್ತದೆ ಎಂದು ಗೃಹ ಸಚಿವ ಡಾ. ಪರಮೇಶ್ವರ್ ಅವರು ಹೇಳಿದ್ದಾರೆ.

ತೆರಿಗೆ ವಿಚಾರದಲ್ಲಿ ಕೇಂದ್ರ ಸರ್ಕಾರ ನಮ್ಮ ಪಾಲಿನ ಹಣ ನೀಡುತ್ತಿಲ್ಲ. ಹೀಗಾ–ಗಿಯೇ ಬೆಲೆ ಏರಿಕೆ ಅನಿವಾರ್ಯವಾಗಿದೆ ಎಂದು ಸಮರ್ಥಿಸಿಕೊಂಡರು.

ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಹಣ ಸಿಗದಿದ್ದಾಗ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ರಾಜ್ಯ ಸರ್ಕಾರವು




ಕೆಲವು ಸರಕುಗಳ ಬೆಲೆಗಳನ್ನು ಅನಿವಾರ್ಯವಾಗಿ ಹೆಚ್ಚಿಸಬೇಕಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಬೆಲೆ ಏರಿಕೆ ಮಾಡಲಾಗುತ್ತಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳಿಗೆ 51,000 ಕೋಟಿ ರೂ.ಗಳನ್ನು ನಿಗದಿಪಡಿಸಿದ್ದು. ಬೆಲೆ ಏರಿಕೆಯೂ ಗ್ಯಾರಂಟಿ ಯೋಜನೆಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು.

ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಮಾತನಾಡಿ, ರೈತರಿಗೆ ಸಹಾಯ ಮಾಡಲು ರಾಜ್ಯ ಸರ್ಕಾರ ಹಾಲಿನ ಬೆಲೆಯನ್ನು ಲೀಟರ್‌ಗೆ 4 ರೂ.ಗಳಷ್ಟು ಹೆಚ್ಚಿಸಿದೆ ಎಂದು ಹೇಳಿದರು. ಇದರ ವಿರುದ್ಧ ಪ್ರತಿಭಟಿಸುತ್ತಿರುವ ಬಿಜೆಪಿ ರೈತ ವಿರೋಧಿ ಎಂದು ತಿಳಿಸಿದರು.

ದಕ್ಷಿಣದ ಇತರ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಹಾಲು ಮತ್ತು ಮೊಸರಿನ ಬೆಲೆಗಳು ಇನ್ನೂ ಕಡಿಮೆಯಾಗಿದೆ. ಈ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ ಎಂದು ಹೇಳಿದರು.

ಇದೇ ವೇಳೆ ನೀರಿನ ದರ ಏರಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ನೀರಿನ ದರವನ್ನು ಲೀಟರ್‌ಗೆ ಒಂದು ಪೈಸೆ ಹೆಚ್ಚಿಸುವುದು ಅನಿವಾರ್ಯವಾಗಿದೆ. ನಾಗರಿಕರಿಗೆ ಹೊರೆಯಾಗದಂತೆ ಬಿಡಬ್ಲ್ಯೂಎಸ್‌ಎಸ್‌ಬಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

# ಕೇಂದ್ರದ ಹಣಕಾಸಿನ ಮಸೂದೆ ಖಂಡಿಸಿ ಪಿಂಚಣಿದಾರರ ಪ್ರತಿಭಟನೆ

**ಚಿಕ್ಕಮಗಳೂರು :** ಕೇಂದ್ರ ಸರ್ಕಾರ ಲೋಕಸಭೆಯಲ್ಲಿ ಮಂಡಿಸಿ ಅಂಗೀಕೃತಗೊಳಿಸಿರುವ ಹಣಕಾಸಿನ ಮಸೂದೆ ಕೇಂದ್ರ ಸರ್ಕಾರದ ಪಿಂಚಣಿದಾರರಿಗೆ ಮಾಡಿರುವ ಅನ್ಯಾಯ ಎಂದು ಅಖಿಲ ಭಾರತ ಬಿಎಸ್‌ಎನ್‌ಎಲ್ ಪಿಂಚಣಿದಾರರ ಕ್ಷೇಮಾಭಿವೃದ್ಧಿ ಜಿಲ್ಲಾ ಸಂಘ ಗುರುವಾರ ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಪ್ರತಿಭಟನೆ ನಡೆಸಿತು.

ಈ ಕುರಿತು ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಶಿವಣ್ಣ ಕೇಂದ್ರ ಸರ್ಕಾರವು ದಿನೇ ದಿನೇ ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿದೆ. ಇದೀಗ ಲೋಕಸಭೆಯಲ್ಲಿ ಮಂಡಿಸಿದ ಹಣಕಾಸು ಮಸೂದೆಯಲ್ಲಿ ಇನ್ನು ಮುಂದೆ ಯಾವುದೇ ರೀತಿಯ




ಕೇಂದ್ರ ಸರ್ಕಾರದ ಪಿಂಚಣಿದಾರರಿಗೆ ಪರಿಷ್ಕರಣೆ ಇರುವುದಿಲ್ಲ ಎಂಬುದಾಗಿಸಿ ಅನ್ಯಾಯ ಮಾಡಲಾಗಿದೆ ಎಂದರು.

1972 ರ ಪಿಂಚಣಿ ಕಾಯ್ದೆಗೆ ತಿದ್ದುಪಡಿಗೆ ಮುಂದಾಗಿದೆ. 1983 ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ಸಂವಿಧಾನ ಪೀಠದ ತೀರ್ಪಿನ ಪ್ರಕಾರ ಪಿಂಚಣಿಯನ್ನು ಪರಿಷ್ಕರಿಸಿ ಹಿಂದಿನ ಮತ್ತು ಹೊಸಬರಿಗೆ ಯಾವುದೇ ರೀತಿಯ ತಾರತಮ್ಯ ಮಾಡಬಾರದೆಂಬ ಮಹತ್ವದ ತೀರ್ಪನ್ನು ನ್ಯಾಯಾಲಯ ನೀಡಿದೆ ಎಂದು ಹೇಳಿದರು.

ಈ ರೀತಿಯ ಪರಿಷ್ಕರಣೆ ಪಿಂಚಣಿದಾರರಿಗೆ ಸರ್ಕಾರ ಕೊಟ್ಟಿರುವ ದೊಡ್ಡ ಆಘಾತ. ಸತತ ಬೆಲೆ ಏರಿಕೆ ಯಿಂದ ಬದುಕು ದುಸ್ತರವಾಗಿದೆ. ಪಿಂಚಣಿ ಪರಿಷ್ಕರಣೆ ಮಾಡುವುದಿಲ್ಲ ಎಂಬ ಸರ್ಕಾರದ ಹುನ್ನಾರ ಸಂವಿಧಾನ ಬಾಹಿರ. ಈ ಬಗ್ಗೆ ಸಂವಿಧಾನದಲ್ಲೂ ಸಹ ಪಿಂಚಣಿದಾರರಿಗೆ ರಕ್ಷಣೆಯನ್ನು ಕೊಟ್ಟಿದೆ ಎಂದರು.

ಸುಪ್ರೀಂಕೋರ್ಟಿನ ಮುಖ್ಯನ್ಯಾಯಾಧೀಶ ಚಂದ್ರಚೂಡ್‌ರವರ ನೇತೃತ್ವದ ಸಂವಿಧಾನ ಪೀಠ ಪಿಂಚಣಿ ಯಲ್ಲಿ ಯಾವುದೇ ತಾರತಮ್ಯ ಮಾಡುವಾಗಿಲ್ಲ, ಪಿಂಚಣಿ ಪರಿಷ್ಕರಣೆ ನಿರಂತರವಾಗಿರಬೇಕು ಎಂದು 1983 ರಲ್ಲಿ ತೀರ್ಪನ್ನು ವಿಧಿಸಿದೆ. ಆದರೀಗ ಕೇಂದ್ರ ಸರ್ಕಾರ ತೀರ್ಪನ್ನು ಧಿಕ್ಕರಿಸಿ ಪಿಂಚಣಿ ಪರಿಷ್ಕರಣೆ ಮಾಡದಿರಲು ನಿರ್ಧ ರಿಸಿರುವುದು ಖಂಡನೀಯ ಎಂದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಹಿರಿಯಣ್ಣ, ಮುಖಂಡರಾದ ರಾಘವೇಂದ್ರ, ವೆಂಕಟೇಶ್, ಕಾಫಿ ಬೋರ್ಡ್ ನ ವೆಂಕಟೇಶ್, ರಾಜೇಂದ್ರ ಅನ್ವರ್, ಹುಸೇನ್, ಅಬೂಬಕರ್, ಸೆಂಟ್ರಲ್ ಎಕೈಸ್ ಅಂಚೆ ಇಲಾಖೆ ವಿಮಾನ ನಿಗಮ ಸದಸ್ಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಇಂದಾವರ ಸಹಕಾರ ಸಂಘಕ್ಕೆ ಯತೀಶ್ ಅಧ್ಯಕ್ಷ, ಉಪಾಧ್ಯಕ್ಷ ಗುರುಸಿದ್ದೇಗೌಡ



**ಚಿಕ್ಕಮಗಳೂರು :** ತಾಲ್ಲೂಕಿನ ಇಂದಾವರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಐ.ಎಸ್.ಯತೀಶ್ ಮತ್ತು ಉಪಾಧ್ಯಕ್ಷರಾಗಿ ಐ.ಸಿ.ಗುರುಸಿದ್ದೇಗೌಡ ಗುರುವಾರ ಅವಿರೋಧವಾಗಿ ಆಯ್ಕೆಯಾದರು.

ಈ ವೇಳೆ ಅಭಿನಂದನೆ ಸಲ್ಲಿಸಿ ಮಾತನಾಡಿದ ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ. ರಾಜಶೇಖರ್ ಗ್ರಾಮ ಸ್ಥರನ್ನು ಒಗ್ಗೂಡಿಸಿಕೊಂಡು ಎಲ್ಲರ ಕೆಲಸಗಳನ್ನು ಮಾಡುವುದು ಅಧ್ಯಕ್ಷರ ದೊಡ್ಡ ಜವಾಬ್ದಾರಿ. ಹಿರಿಯರು ಕಟ್ಟಿ ಬೆಳೆಸಿದ ಸಹಕಾರ ಸಂಘವನ್ನು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿ ಅಭಿವೃದ್ಧಿಯತ್ತ ಕೊಂಡೊಯ್ಯಬೇಕು ಎಂ ದರು.

ಗ್ರಾಮದ ಅಭಿವೃದ್ಧಿಗಾಗಿ ಹಿರಿಯರು ಸಂಘವನ್ನು ಸ್ಥಾಪಿಸಿದ್ದು ಜೊತೆಗೆ ಸರ್ಕಾರವು ಪ್ರಾಮುಖ್ಯತೆ ನೀಡಿರುವ ಕಾರಣ ನೂತನ ಆಡಳಿತ ಮಂಡಳಿ ರಾಜಕೀಯ ಬೆರೆಸದೇ, ಪಕ್ಷಾತೀತವಾಗಿ ಸೊಸೈಟಿಯ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯ ಮಾಡಬೇಕು ಎಂದು ಸಲಹೆ ಮಾಡಿದರು.

ನಿರ್ದೇಶಕರು, ಗ್ರಾಮಸ್ಥರ ಸಹಕಾರದಿಂದ ಅತ್ಯುತ್ತಮ ಕೆಲಸ ಕಾರ್ಯಗಳನ್ನು ಕೈಗೊಂಡು ಮುನ್ನಡೆ ಸಾಧಿಸಿ, ಇಡೀ ಜಿಲ್ಲೆಯಲ್ಲಿ ಉತ್ತಮ ಹೆಸರು ಗಳಿಸಬೇಕು. ಸೊಸೈಟಿಯ ಹಿಂದಿನ ಘಟನೆಗಳಿಗೆ ಮಣೆಹಾಕದೇ, ಮುಂದಿನ ಸಹಕಾರ ಸಂಘದ ಅಭಿವೃದ್ಧಿಗಾಗಿ ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಸಹಕಾರ ಸಂಘದ ನೂತನ ಅಧ್ಯಕ್ಷ ಐ.ಸಿ.ಯತೀಶ್ ಮಾತನಾಡಿ ಇಂದಾವರ ಸೊಸೈಟಿ ಪುರಾತನ ಹಿನ್ನೆಲೆ ಹೊಂದಿರುವ ಸಂಘವಾಗಿದೆ. ಗ್ರಾಮಸ್ಥರ ಏಳಿಗೆಗೆ ಹಿರಿಯರು ಸಂಘವನ್ನು ಸ್ಥಾಪಿಸಿ ಅಭಿವೃದ್ಧಿಗೆ ಮುಡಿಪಿಟ್ಟಿದ್ದು, ಆ ಹಾದಿಯಲ್ಲೇ ನೂತನ ಆಡಳಿತ ಮಂಡಳಿಯು ಕಾರ್ಯನಿರ್ವಹಿಸಿ ಎಲ್ಲಿಯೂ ಕಪ್ಪುಚುಕ್ಕೆ ಬರದಂತೆ ಕೆಲಸ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಸಹಕಾರ ಸಂಘದ ನಿರ್ದೇಶಕಾದ ಐ.ಆರ್.ಗಜೇಂದ್ರ, ಐ.ಪಿ.ಪ್ರೇಮ್‌ಕುಮಾರ್, ಐ.ಎಂ. ಮಂಜುನಾಥ್, ಐ.ಜೆ.ಮಲ್ಲೇಗೌಡ, ಐ.ಆರ್.ಕೆಂಚಯ್ಯ, ಐ.ಆರ್.ಮಂಜುನಾಥ್, ಐ.ಎಂ.ಸೋಮಶೇಖರ್, ಸಿ.ಎಂ. ವನಜಾಕ್ಷಿ, ನೀಲಾ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಪವನ್‌ಕುಮಾರ್, ಮುಖಂಡರುಗಳಾದ ಬೀಕನಹಳ್ಳಿ ಸೋಮ ಶೇಖರ್, ಮುಗುಳುವಳ್ಳಿ ನಿರಂಜನ್, ಹೆಚ್.ಕೆ.ಕೇಶವಮೂರ್ತಿ, ಗ್ರಾಮಸ್ಥರಾದ ಸುರೇಶ್, ಸುಭಾಶ್, ದಿನೇಶ್, ರಾ ಜು, ರವಿ, ಲವಕುಮಾರ್, ರಿಟರ್ನಿಂಗ್ ಅಧಿಕಾರಿ ಶಂಕರೇಗೌಡ ಮತ್ತಿತರರು ಉಪಸ್ಥಿತರಿದ್ದರು.

## ಚಿಕ್ಕಮಗಳೂರಿನಲ್ಲಿ ಸರ್ಕಾರದ ನಡೆ ಕಾರ್ಯಕರ್ತರ ಕಡೆ ಸಮಾವೇಶ

**ಚಿಕ್ಕಮಗಳೂರು :** ಸರ್ಕಾರದ ನಡೆ ಕಾರ್ಯಕರ್ತರ ಕಡೆ ಸಮಾವೇಶವು ಏಪ್ರಿಲ್ 05 ರಂದು ನಗರದ ಜಿಲ್ಲಾ ನ್ಯಾಯಾಲಯ ಸಮೀಪದ ಎಂಎಲ್‌ವಿ ರೋಟರಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳಾದ ಹೆಚ್.ಪಿ.ಮಂಜೇಗೌಡ ಹಾಗೂ ಸತೀಶ್ ಮಹಡಿಮನೆ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರ ಸಮಾವೇಶವು ಶಾಸಕ ಹೆಚ್.ಡಿ.ತಮ್ಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ಸಮಾವೇಶಕ್ಕೆ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ.ಜಾರ್ಜ್, ಜಿಲ್ಲೆಯ ಸಂಘಟನಾ ಉಸ್ತುವಾರಿಗಳು, ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ಬಿ.ರಮಾನಾಥ ರೈ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್ ಸೇರಿದಂತೆ ಕ್ಷೇತ್ರದ ಎಲ್ಲಾ ಮುಖಂಡರುಗಳು ಆಗಮಿಸಲಿದ್ದಾರೆ.

ಸಮಾವೇಶಕ್ಕೆ ಎಐಸಿಸಿ, ಕೆಪಿಸಿಸಿ, ಡಿಸಿಸಿ ಹಾಗೂ ವಿವಿಧ ಸೆಲ್‌ಗಳ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್‌ನ ಪದಾಧಿಕಾರಿಗಳು, ಬಿಎಲ್‌ಎ–2, ಬೂತ್ ಅಧ್ಯಕ್ಷರು, ಚುನಾಯಿತ ಪ್ರತಿನಿಧಿಗಳು, ನಾಮ ನಿರ್ದೇಶಿತರು, ಕಾರ್ಯಕರ್ತರು ಈ ಸಮಾವೇಶಕ್ಕೆ ಭಾಗವಹಿಸುವಂತೆ ಚಿಕ್ಕಮಗಳೂರು ಹಾಗೂ ಸಖರಾಯಪಟ್ಟಣ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರುಗಳು ಮನವಿ ಮಾಡಿದ್ದಾರೆ.

## ನೇರ ಸಂದರ್ಶನ

**ಚಿಕ್ಕಮಗಳೂರು :** ನಗರದ ಎಂ.ಜಿ.ರಸ್ತೆಯ ಖಾಸಗಿ ಕಂಪನಿಯಾದ ಕೆ.ಜಿ.ಪಿ. ಗ್ರೂಪ್ ಆಫ್ ಕಂಪನಿಸ್ (ಕೆ.ಜಿ.ಪಿ. ಜುವೆಲ್ಲರ್ಸ್) ತನ್ನಲ್ಲಿ ಖಾಲಿ ಇರುವ (ಬಿಎಂ, ಎಬಿಎಂ, ಬಿಇ, ಎಸ್‌ಇ, ಎಸ್‌ಓ, ಹೆಚ್‌ಕೆ ಮತ್ತು ಒಬಿ) ಹುದ್ದೆಗಳಿಗೆ ನೇರ ಸಂದರ್ಶನವನ್ನು ಏಪ್ರಿಲ್ 6 ರಂದು 10 ಗಂಟೆಗೆ ಏರ್ಪಡಿಸಲಾಗಿದೆ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 35 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಭಾಗವಹಿಸಬಹುದು. ಅಭ್ಯರ್ಥಿಗಳು ಆಧಾರ್ ಕಾರ್ಡ್, ಪಾನ್ ಕಾರ್ಡ್, 3 ಫೋಟೋ ಮತ್ತು 1 ಸೆಟ್ ವೈಯಕ್ತಿಕ ವಿವರ (ರೆಸ್ಯೂಮ್) ದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು.

### ಹೊಸದುರ್ಗ ತಾಲ್ಲೂಕಿನ ವಿವಿಧ ಗ್ರಾ.ಪಂಗಳಿಗೆ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಭೇಟಿ

# ನರೇಗಾ ಯೋಜನೆ: ಕಾಮಗಾರಿಯ ಗುಣಮಟ್ಟ ಕಾಪಾಡಿ

**ಚಿತ್ರದುರ್ಗ :** ನರೇಗಾ ಯೋಜನೆಯ ಮಾರ್ಗಸೂಚಿ ಅನ್ವಯವೇ ಕೆಲಸ ನಿರ್ವಹಿಸಬೇಕು ಹಾಗೂ ಕಾಮಗಾರಿಯ ಗುಣಮಟ್ಟ ಕಾಪಾಡಿಕೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೊಸದುರ್ಗ ತಾಲ್ಲೂಕಿನ ಹೆಬ್ಬಳ್ಳಿ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗೆ ಮಂಗಳವಾರ ಭೇಟಿ ನೀಡಿ, ಚಾಲನೆಯಲ್ಲಿರುವ ಮಹಾತ್ಮಾಗಾಂಧಿ ನರೇಗಾ ಯೋಜನೆಯ ಗ್ರಾಮೀಣ ಗೋದಾಮು ಕಟ್ಟಡ ವೀಕ್ಷಣೆ ಹಾಗೂ ಕಾಮಗಾರಿಯ ಕಡತ ಪರಿಶೀಲಿಸಿದರು.

ಹೆಬ್ಬಳ್ಳಿಯಲ್ಲಿರುವ ಗೋದಾಮು ಕಟ್ಟಡವು ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗಬೇಕು ಎಂದು ನರೇಗಾ ಇಂಜಿನಿಯರ್ ಅವರಿಗೆ ಸೂಚಿಸಿದರು. ನಂತರ ಅದೇ ಗ್ರಾಮದ ಆಯುಷ್ ಆರೋಗ್ಯ ಮತ್ತು ಕ್ಷೇಮ ಕೇಂದ್ರ–ಕ್ಕೆ ಭೇಟಿ ನೀಡಿ, ವೈದ್ಯಾಧಿಕಾರಿಗಳಿಂದ ಮಾಹಿತಿ ಪಡೆದು, ಔಷಧಿ ಕೊಠಡಿಗೆ ತೆರಳಿ ಪರಿಶೀಲಿಸಿದರು. ಈ ಕೇಂದ್ರಕ್ಕೆ ಬರುವ ರೋಗಿಗಳಿಗೆ ಆರೋಗ್ಯ–ಕ್ಕೆ ಸಂಬಂಧಿಸಿದ ಉತ್ತಮ ಸಲಹೆ ಮತ್ತು ಔಷಧೋಪಚಾರಗಳನ್ನು ನೀಡಿ ಆರೋಗ್ಯವಂತರನ್ನಾಗಿ ಮಾಡುವುದು ನಿಮ್ಮ ಜವಾಬ್ದಾರಿ ಎಂದು ವೈದ್ಯಾಧಿಕಾರಿಗೆ ಸೂಚಿಸಿದರು.

ಸಾಮಾಜಿಕ ಅರಣ್ಯ ವಲಯ ವತಿಯಿಂದ ಕುಂಬಾರಗಟ್ಟೆ ನರ್ಸರಿಯಲ್ಲಿ ನರೇಗಾ ಯೋಜನೆಯಡಿ ನರ್ಸರಿ ಸಸಿಗಳನ್ನು ಬೆಳೆಸಿದ್ದು, ಸಸ್ಯ ಕ್ಷೇತ್ರಕ್ಕೆ ಭೇಟಿ ನೀಡಿ ವೀಕ್ಷಿಸಿದರು. ವಲಯ ಅರಣ್ಯ ಅಧಿಕಾರಿ ದಯಾನಂದ ಅವರಿಂದ ಮಾಹಿತಿ ಪಡೆದ ಜಿ.ಪಂ ಸಿಇಒ, ಮಳೆಗಾಲ ಪ್ರಾರಂಭದಲ್ಲಿ ಸಸಿಗಳನ್ನು ನೆಡಬೇಕು. ಇದಕ್ಕೆ ಸಂಬಂಧಿಸಿದಂತೆ ಪೂರ್ವ ಸಿದ್ಧತೆಗಳನ್ನು ಈ ಕೂಡಲೇ ಮಾಡಿಕೊಂಡು, ಸಕಾಲದಲ್ಲಿ ಸಸಿಗಳ ವಿತರಿಸಿ, ಮಳೆಗಾಲ ಪ್ರಾರಂಭ ಹಂತದಲ್ಲೇ ಸಸಿಗಳನ್ನು ನೆಡುವಂತೆ ತಾಕೀತು ಮಾಡಿದರು. ನಂತರ ದೇವಿಗೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನವಾದ ಕಲ್ಯಾಣಿ ಅಭಿವೃದ್ಧಿ ಕಾಮಗಾರಿ ವೀಕ್ಷಿಸಿ, ಕಲ್ಯಾಣಿ ಸುತ್ತ–ಮುತ್ತ ಗಿಡ–ಗಂಟೆಗಳಿದ್ದು, ಅವುಗಳನ್ನು ತೆಗೆಸಿ, ಸ್ವಚ್ಛಗೊಳಿಸಿ, ಕಲ್ಯಾಣಿ ಸುತ್ತ–ಮುತ್ತ ಉತ್ತಮ ಪರಿಸರ ಕಾಪಾಡುವಂತೆ ನರೇಗಾ ಸಹಾಯಕ ಇಂಜಿನಿಯರ್‌ಗೆ ಸೂಚಿಸಿದರು.

ಕೊಂಡಾಪುರದ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಲಾದ ಹೈಟೆಕ್ ಶೌಚಾಲಯ ಮತ್ತು ಅಡುಗೆ ಕೋಣೆ ವೀಕ್ಷಣೆ ಮಾಡಿ,



ನಂತರ ಶಾಲಾ ಕೊಠಡಿಗಳಿಗೆ ತೆರಳಿ ಪರಿಶೀಲಿಸಿದರು. ಶಾಲಾ ಆವರಣದಲ್ಲಿರುವ ಆಟದ ಮೈದಾನ (ಶಟಲ್ ಕಾಕ್) ವೀಕ್ಷಿಸಿ, ಶಾಲಾ ಮುಖ್ಯ ಶಿಕ್ಷಕ ಶೇಖರಪ್ಪ ಅವರಿಂದ ಮಾಹಿತಿ ಪಡೆದು, ಶೌಚಾಲಯ ಮತ್ತು ಅಡುಗೆ ಕೋಣೆ ಸಮರ್ಪಕವಾಗಿ ಇಲ್ಲಿನ ವಿದ್ಯಾರ್ಥಿಗಳಿಗೆ ಸದ್ಬಳಕೆ ಮಾಡಿಕೊಳ್ಳುವಂತೆ ಮನವರಿಕೆ ಮಾಡುವಂತೆ ಶಾಲಾ ಮುಖ್ಯ ಶಿಕ್ಷಕರು ಮತ್ತು ಸಹಶಿಕ್ಷಕರಿಗೆ ತಿಳಿಸಿದರು.

ಬಾಗೂರು ಗ್ರಾಮ ಪಂಚಾಯತಿಗೆ ಭೇಟಿ ನೀಡಿ, ನರೇಗಾ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಿರುವ ಸಂಜೀವಿನಿ ಶೆಡ್ ಪೂರ್ಣಗೊಂಡ ಕಾಮಗಾರಿ ವೀಕ್ಷಣೆ ಮಾಡಿ, ಈ ಕೊಠಡಿಯನ್ನು ಸ್ವ–ಸಹಾಯ ಸಂಘದ ಸದಸ್ಯರಿಗೆ ಉಪಯೋಗವಾಗುವಂತೆ ನೋಡಿಕೊಳ್ಳಬೇಕು ಎಂದು ಪಿಡಿಒ ಮತ್ತು ಸಿಬ್ಬಂದಿಗಳಿಗೆ ಸೂಚಿಸಿದರು. ನಂತರ ಅದೇ ಗ್ರಾಮದ ಮೂಡಲ ಮುತ್ತಿನ ಕೆರೆಗೆ ಭೇಟಿ ನೀಡಿದರು. ಈ ಕೆರೆಯಲ್ಲಿ ಕಳೆದ ವರ್ಷದಲ್ಲಿ ನರೇಗಾ ಯೋಜನೆಯಿಂದ ಕೆರೆ ಹೂಳು ತೆಗೆಯುವ ಮತ್ತು ಕೆರೆ ಏರಿ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿತ್ತು. ಕಳೆದ ಬಾರಿ ಉತ್ತಮ ಮಳೆ ಬಂದಿದ್ದ ಪ್ರಯುಕ್ತ ಕೆರೆ ತುಂಬಿದೆ ಎಂದು ಪಿಡಿಒ ಮತ್ತು ಸಾರ್ವಜನಿಕರು ಜಿ.ಪಂ ಸಿಇಒ ಅವರಿಗೆ ಮಾಹಿತಿ ನೀಡಿದರು.

ಜಿಲ್ಲಾ ಅಂತರ್ಜಲ ಇಲಾಖೆಯು ಅಂತರ್ಜಲಮಟ್ಟ ಮಾಪನ ಮಾಡುವ ಹೆಬ್ಬಳ್ಳಿ ಮತ್ತು ಬಾಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಅಧ್ಯಯನ ಕೊಳವೆ ಬಾವಿಗಳ ಅಂತರ್ಜಲ ಸ್ಥಿರ ಜಲಮಟ್ಟವನ್ನು ಜಿ.ಪಂ ಸಿಇಒ ಪರಿಶೀಲಿಸಿದರು. ಹೆಬ್ಬಳ್ಳಿ ಗ್ರಾಮದಲ್ಲಿ ನೆಲಮಟ್ಟದಿಂದ 22 ಮೀಟರ್ ಆಳದಲ್ಲಿ ಅಂತರ್ಜಲಮಟ್ಟ ಮತ್ತು ಬಾಗೂರು ಗ್ರಾಮದ ಅಧ್ಯಯನ ಕೊಳವೆ ಬಾವಿಯಲ್ಲಿ 14.38 ಮೀಟರ್ ಆಳದಲ್ಲಿ ಅಂತರ್ಜಲ ಮಟ್ಟ ಇರುವುದು ವಾಟರ್ ಲೆವಲ್ ಇಂಡಿಕೇಟರ್ ಉಪಕರಣದ ಮೂಲಕ ಮಾಪನಮಾಡಿಸಿ, ಪ್ರತಿ ತಿಂಗಳು ಈ ಮಾಪನದ ಮೂಲಕ ಅಂತರ್ಜಲಮಟ್ಟ ಪರೀಕ್ಷಿಸಿ, ಮಾಹಿತಿ ನೀಡುವಂತೆ ಭೂ ವಿಜ್ಞಾನಿಗಳಿಗೆ ಸೂಚಿಸಿದರು.

ಅಹಮ್ಮದ್ ನಗರ ಗಡಿಯಲ್ಲಿ ಹೊಸದುರ್ಗ ಪಟ್ಟಣ ಮತ್ತು 346 ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಮೊದಲನೇ ಹಂತದ 3 ಲಕ್ಷ ಲೀಟರ್ ಸಾಮರ್ಥ್ಯ ಮತ್ತು 4.5 ಲಕ್ಷ ಲೀಟರ್ ಸಾಮರ್ಥ್ಯದ ಪಂಪ ಹೌಸ್‌ಗೆ ಭೇಟಿ ನೀಡಿ ವೀಕ್ಷಿಸಿದರು. ಈ ಕಾಮಗಾರಿ ವಿಳಂಬಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಈ ಕುರಿತು ಮುಖ್ಯ ಇಂಜಿನಿಯರ್ ಅವರಿಂದ ಮಾಹಿತಿ ಪಡೆದರು. ಅರಣ್ಯ ಇಲಾಖೆಯಿಂದ ವಿಳಂಬವಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಸಂಬಂಧಿಸಿದ ಇಲಾಖೆಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರ ಪಡೆದು, ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್, ಹಿರಿಯ ಭೂ ವಿಜ್ಞಾನಿ ಬಸಂತ್, ಹೊಸದುರ್ಗ ತಾ.ಪಂ ಇಒ ಸುನೀಲ್, ಸಹಾಯ ನಿರ್ದೇಶಕ (ನರೇಗಾ) ನಯಾಜ್, ನರೇಗಾ ಯೋಜನೆಯ ಸಂಯೋಜಕ ಸಂತೋಷ್ ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**